ಶನಿವಾರ 10.01.2026
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 116
Digital Varthe Kannada Daily
Volume 01 - Issue 116
Saturday 10.01.2026
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ
ಕನ್ನಡ ದಿನಪತ್ರಿಕೆ

DIGITAL VARTHE
digitalvarthe@gmail.com
www.digitalvarthe.com

## ಅರ್ಹತಾ ಪರೀಕ್ಷೆ ವಿರೋಧಿಸಿ ಕೃಷ್ಣರಾಜಪೇಟೆಯಲ್ಲಿ ಶಿಕ್ಷಕರಿಂದ ಮೌನ ಪ್ರತಿಭಟನೆ



ಶಿಕ್ಷಕರು ಅರ್ಹತಾ ಪರೀಕ್ಷೆ ಎದುರಿಸಿ ತೇರ್ಗಡೆ ಹೊಂದಬೇಕು. ನಂತರ ಕರ್ತವ್ಯದಲ್ಲಿ ಮುಂದುವರೆಯಬೇಕು ಎಂದು ತೀರ್ಪು ನೀಡಿರುವ ಸುಪ್ರಿಂ ಕೋರ್ಟಿನ ತೀರ್ಪನ್ನು ವಿರೋಧಿಸಿ ತಾಲ್ಲೂಕಿನ ಶಿಕ್ಷಕರು ಕಪ್ಪು ಪಟ್ಟಿ ಧರಿಸಿ ಕರ್ತವ್ಯಕ್ಕೆ ಹಾಜರಾಗುವ ಮೂಲಕ ತಮ್ಮ ಪ್ರತಿಭಟನೆ ವ್ಯಕ್ತಪಡಿಸಿದರು.

ಇಂದು ದೇಶಾದ್ಯಂತ ರಾಷ್ಟ್ರೀಯ ಶಿಕ್ಷಕರ ಫೆಡರೇಷನ್ ಮತ್ತು ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಕರೆಯ ಮೇರೆಗೆ ತಾಲ್ಲೂಕಿನ ಎಲ್ಲಾ ಪ್ರಾಥಮಿಕ ಶಾಲಾ ಶಿಕ್ಷಕರು ಬೆಳಿಗ್ಗೆ 10ಗಂಟೆಯಿಂದ ಸಂಜೆ 4.20ವರೆಗೆ ಕೈಗೆ ಕಪ್ಪು ಪಟ್ಟಿ ಧರಿಸಿ ಶಿಕ್ಷಕರ ಅರ್ಹತಾ ಪರೀಕ್ಷೆ ವಿರೋಧಿಸಿದರು. ರಾಜ್ಯದ ಶಿಕ್ಷಕರಿಗೂ ಕೇಂದ್ರ ಸರ್ಕಾರದಂತೆ ಸಮಾನ ವೇತನ ನೀಡಬೇಕು ಮತ್ತು ಹೊಸ ಪಿಂಚಣಿ ಯೋಜನೆ ಬದಲಾಗಿ ಹಳೆಯ ಪಿಂಚಣಿ ಯೋಜನೆ ಜಾರಿ ಮಾಡಬೇಕು. ಶಿಕ್ಷಕರ ಅರ್ಹತಾ ಪರೀಕ್ಷೆ ಸಂಬಂಧ ಕೇಂದ್ರ ಸರ್ಕಾರ ವಿಶೇಷ ಕಾನೂನು ಮಂಡಿಸಿ ಸುಪ್ರಿಂ ಆದೇಶಕ್ಕೆ ತಡೆ ನೀಡಬೇಕು ಹೀಗೆ ಹಲವು ಬೇಡಿಕೆಗಳ ಈಡೇರಿಕೆಗಾಗಿ ಒತ್ತಾಯಿಸಿ ತಾಲ್ಲೂಕಿನಾದ್ಯಂತ ಶಿಕ್ಷಕರು ಕಪ್ಪು ಪಟ್ಟಿ ಧರಿಸಿ ಪ್ರತಿಭಟನೆ ನಡೆಸಿದರು. ತಾಲ್ಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ನಾಟನಹಳ್ಳಿ ಶಾಲೆಯಲ್ಲಿ ಕಪ್ಪು ಪಟ್ಟಿ ಧರಿಸಿ ಕರ್ತವ್ಯಕ್ಕೆ ಹಾಜರಾದರು. ನಾಟನಹಳ್ಳಿ ಶಾಲೆಯಲ್ಲಿ ಮುಖ್ಯ ಶಿಕ್ಷಕರಾದ ಕಾಂತರಾಜು, ಹೆಚ್.ಆರ್. ಪೂರ್ಣಚಂದ್ರತೇಜಸ್ವಿ, ಗೀತಾ ಮತ್ತು ಆಶಾ ಅವರು ಕಪ್ಪು ಪಟ್ಟಿ ಧರಿಸಿ ಕರ್ತವ್ಯಕ್ಕೆ ಹಾಜರಾದರು. ಅಗ್ರಹಾರಬಾಚಹಳ್ಳಿ ಶಾಲೆಯಲ್ಲಿ ಮುಖ್ಯ ಶಿಕ್ಷಕ ಎ.ಹೆಚ್. ಯೋಗೇಶ್, ಶಿಕ್ಷಕರಾದ ತಮ್ಮಯ್ಯ, ನಂಜಪ್ಪ, ಶಾಂತಕುಮಾರಿ, ಪವಿತ್ರ, ಚಿಲ್ಲದಹಳ್ಳಿ ಶಾಲೆಯ ಮುಖ್ಯ ಶಿಕ್ಷಕ ರಮೇಶ್, ಸಹ ಶಿಕ್ಷಕ ಕೃಷ್ಣಯ್ಯ ಇತರರು ಕಪ್ಪು ಪಟ್ಟಿ ಧರಿಸಿ ಕರ್ತವ್ಯ ನಿರ್ವಹಣೆ ಮಾಡಿ ಪ್ರತಿಭಟನೆಗೆ ಬೆಂಬಲ ಸೂಚಿಸಿದರು.

## ವಿಬಿಜಿ, ರಾಮ್ ಜಿ" ಯೋಜನೆಯ ಬಗ್ಗೆ ಕಾನೂನಾತ್ಮಕ ಕ್ರಮ ಕೈಗೊಳ್ಳಲು ಸಚಿವ ಸಂಪುಟ ಸಭೆ ತೀರ್ಮಾನ

**ಬೆಂಗಳೂರು:** ಮಹಾತ್ಮಾ ಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯನ್ನು ಕೇಂದ್ರ ಸರ್ಕಾರ ಹಿಂಪಡೆದಿರುವ ಬಗ್ಗೆ ಸಚಿವ ಸಂಪುಟ ಸಭೆ ಚರ್ಚೆ ನಡೆಸಿದ್ದು, ಇದರ ಬದಲಿಗೆ ತಂದಿರುವ ,"ವಿಬಿಜಿ, ರಾಮ್ ಜಿ" ಯೋಜನೆಯ ಬಗ್ಗೆ ಕಾನೂನಾತ್ಮಕ ಕ್ರಮ ಕೈಗೊಳ್ಳಲು ಸಚಿವ ಸಂಪುಟ ಸಭೆ ತೀರ್ಮಾನಿಸಿದೆ ಎಂದು ಪ್ರವಾಸೋದ್ಯಮ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಹೆಚ್ ಕೆ ಪಾಟೀಲ್ ತಿಳಿಸಿದರು.

ಅವರು ಇಂದು ಸಚಿವ ಸಂಪುಟ ಸಭೆ ನಂತರ ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ತಿಳಿಸಿದರು. ಜನರ ನ್ಯಾಯಾಲಯಕ್ಕೂ ವಿಬಿಜಿ, ರಾಮ್ ಜಿ" ಯೋಜನೆಯ ತೆಗೆದುಕೊಂಡು ಹೋಗಲು ನಿರ್ಣಯಿಸಲಾಗಿದೆ ಎಂದ ಅವರು ಸಂವಿಧಾನದ 73 ನೇ ತಿದ್ದುಪಡಿಯಾದ ನಂತರ ದೇಶದಲ್ಲಿ ವಿಕೇಂದ್ರೀ ಕರಣವಾಗಿದೆ. ಈ ಯೋಜನೆಯಿಂದ ವಿಕೇಂದ್ರೀಕರಣಕ್ಕೆ ಕೊಡಲಿ ಏಟು ಬಿದ್ದಿದೆ. ಗ್ರಾಮೀಣ ಭಾಗದ ಜನರ ಉದ್ಯೋಗದ ಹಕ್ಕನ್ನು ಕಿತ್ತುಕೊಳ್ಳುವ ಕೆಲಸವನ್ನು MN-REGA ವಾಪಸ್ಸು ಪಡೆಯುವ ಮೂಲಕ ಮಾಡಲಾಗಿದೆ ಎಂದರು.

MNREGA ಮೂಲಕ ಪಂಚಾ ಯಿತಿಗಳಲ್ಲಿ ಆಸ್ತಿ ನಿರ್ಮಾಣವಾಗುತ್ತಿತ್ತು. ಈಗ ಕರಾಳ ಕಾನೂನು ತಂದು ಕಾರ್ಮಿಕರು ಗುತ್ತಿಗೆದಾರರು ಮಾಡಿಸುತ್ತಿರುವ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳಲ್ಲಿ ಕೆಲಸ ಮಾಡಬೇಕಿದೆ. ಕೂಲಿಕಾರರ ಹಿತ ಕಾಪಾಡುವ ಆಸಕ್ತಿಯನ್ನು ಕೇಂದ್ರ ಸರ್ಕಾರ ತೋರಿಸಿಲ್ಲ . ಬದಲಿಗೆ ಉದ್ಯೋಗದ ಹಕ್ಕನ್ನು ಕಿತ್ತುಕೊಂಡಿದೆ. ಗ್ರಾಮಗಳಲ್ಲಿ ಯಾವ ಕೆಲ ಸವಾಗಬೇಕೆಂದು ತೀರ್ಮಾನಿಸುವ ಅಧಿಕಾರ ಪಂಚಾಯಿತಿಗಳಿಗಿತ್ತು. ಈಗ ಅದನ್ನು ಸಂಪೂರ್ಣವಾಗಿ ಕಿತ್ತುಕೊಂಡು ಕೆಲಸ ಎಲ್ಲಿ ಆಗಬೇಕು ಎಂದು ಕೇಂದ್ರ ಸರ್ಕಾರ ನಿರ್ದೇಶನ ನೀಡುತ್ತದೆ. ಈ ಕರಾಳ ಶಾಸನವನ್ನು ಕರ್ನಾಟಕ ಸರ್ಕಾರ ತೀವ್ರವಾಗಿ ವಿರೋಧಿಸುತ್ತದೆ.

ರಾಜಕೀಯವಾಗಿ, ಕಾನೂನಾತ್ಮಕವಾಗಿ ಹಾಗೂ ಜನರ ನ್ಯಾಯಾಲಯದಲ್ಲಿ ಹೋರಾಟ ಮಾಡುವುದಾಗಿ ತಿಳಿಸಿದರು.

ಮೇಲ್ನೋಟಕ್ಕೆ 125 ದಿನ ಕೆಲಸ ನೀಡುವುದು ಎಂದಿದ್ದರೂ , ನಿರ್ದಿಷ್ಟವಾಗಿ ಆಗುವಂತಿಲ್ಲ. ಇದಕ್ಕೆ ಹಣವೆಲ್ಲಿದೆ. ಶೇ.40% ರಷ್ಟು ಅನುದಾನವನ್ನು ರಾಜ್ಯ ಸರ್ಕಾರ ಭರಿಸಬೇಕಿದೆ. ಭಾರಿ ಪ್ರಮಾಣದ ಆರ್ಥಿಕ ಹೊರೆ ಬೀಳುವಂತಿದ್ದರೆ ಸಂಬಂಧಪಟ್ಟ ರಾಜ್ಯಗಳೊಂದಿಗೆ ಚರ್ಚೆ ಮಾಡಬೇಕು. ಆದರೆ ಹಾಗೆ ಆಗಿಲ್ಲ. 15ನೇ ಹಣಕಾಸು ಆಯೋಗದ ಶಿಫಾರಸುಗಳು ಅನುಷ್ಠಾನಕ್ಕೆ ಬಂದ ನಂತರ ಇದನ್ನು ಹೊಸದಾಗಿ ಸೇರ್ಪಡೆ ಮಾಡಲಾಗಿದೆ ಎಂದರು.

**ಶೀಘ್ರದಲ್ಲಿ ಪಂಚಾಯತ್ ಚುನಾವಣೆ**

ಪಂಚಾಯಿತಿ ಚುನಾವಣೆಯನ್ನು ಆದಷ್ಟು ಶೀಘ್ರವಾಗಿ ನಡೆಸಲು ತೀರ್ಮಾನಿಸಿದೆ. ಹಲವಾರು ಪಂಚಾಯ್ತಿಗಳು ಸುಪ್ರೀಂ ಕೋರ್ಟಿಗೆ ಹೋಗುವಂತೆ ರಾಜ್ಯ ಸರ್ಕಾರವನ್ನು ಕೋರಿವೆ. ಒಂದೆರಡು ದಿನಗಳಲ್ಲಿ ಈ ಬಗ್ಗೆ ತೀರ್ಮಾನ ಮಾಡಲಿದೆ ಎಂದರು.

## 2.5ಕೋಟಿ ಕಾಮಗಾರಿಗೆ ಚಾಲನೆ ನಿಡಿದ ಹೆಚ್.ಟಿ.ಮಂಜು



**ಕೆ.ಆರ್ ಪೇಟೆ:** ತಾಲ್ಲೂಕಿನ ಮೊಸಳೇ ಕೊಪ್ಪಲು ಗ್ರಾಮದಲ್ಲಿ ಸಣ್ಣ ನೀರಾವರಿ ಇಲಾಖೆಯ ಸುಮಾರು ಎರಡೂವರೆ ಕೋಟಿ ರೂಪಾಯಿಗಳ ವಿಶೇಷ ಅನುಧಾನದಲ್ಲಿ ಕೈಗೊಳ್ಳಲಾಗುತ್ತಿರುವ ರಸ್ತೆ ಅಭಿವೃದ್ಧಿ ಮತ್ತು ಬಾಕ್ಸ್ ಚರಂಡಿ ನಿರ್ಮಾಣ ಹಾಗೂ ಹೈಮಾಸ್ಕ್ ಬೀದಿ ದೀಪ ನಿರ್ಮಾಣ ಕಾಮಗಾರಿಗಳಿಗೆ ಶಾಸಕ ಹೆಚ್.ಟಿ.ಮಂಜು ಅವರು ಭೂಮಿ ಪೂಜೆ ನೆರವೇರಿಸಿದರು.

ಈಗಿನ ಕಾಂಗ್ರೆಸ್ ಸರ್ಕಾರದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ತಮ್ಮ ಪಕ್ಷದ ಘೋಷಿತ ಐದು ಗ್ಯಾರಂಟಿ ಯೋಜನೆಗಳಿಗೆ ಅನುಧಾನವನ್ನು ಹೆಚ್ಚು ಬಳಕೆ ಮಾಡುತ್ತಿದ್ದಾರೆ. ಇದರಿಂದ ರಾಜ್ಯದ ಮೂಲಭೂತ ಸೌಲಭ್ಯಗಳಿಗೆ ಅನುಧಾನದ ಕೊರತೆ ಎದುರಾಗಿದೆ. ಇದು ನಮ್ಮ ಕೆ.ಆರ್.ಪೇಟೆ ತಾಲ್ಲೂಕಿಗೂ ತುಂಬಾ ಹೊಡೆತ ಬಿದ್ದಿದೆ. ಮುಂದಿನ ದಿನಗಳಲ್ಲಿಯಾದರೂ ಮೂಲಭೂತ ಸೌಲಭ್ಯಗಳಾದ ಕೃಷಿ, ನೀರಾವರಿ, ರಸ್ತೆ, ಸೇತುವೆಗಳ ಅಭಿವೃದ್ಧಿ,ಕೆರೆ ಕಟ್ಟೆಗಳ ಅಭಿವೃದ್ಧಿಗೆ ಅನುಧಾನ ನೀಡಲಿ ಹಾಗೂ ಗ್ರಾಮೀಣ ಜನರಿಗೆ ಆಶ್ರಯ ಮನೆಗಳನ್ನು ನೀಡಲಿ ಎಂದು ಶಾಸಕ ಎಚ್.ಟಿ.ಮಂಜು ಸರ್ಕಾರವನ್ನು ಒತ್ತಾಯ ಮಾಡಿದರು.

**ಮೈತ್ರಿ ಬಗ್ಗೆ ವರಿಷ್ಟರ ತೀರ್ಮಾನಕ್ಕೆ ಬದ್ಧ**; ತಾಲ್ಲೂಕಿನಲ್ಲಿ ಜೆಡಿಎಸ್ ಸುಭದ್ರವಾಗಿದೆ. ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಬಿಜೆಪಿಯೊಂದಿಗೆ ಮೈತ್ರಿ ಮಾಡಿಕೊಳ್ಳುವುದು ಅಥವಾ ಸ್ವತಂತ್ರವಾಗಿ ಸ್ಪರ್ಧಿಸುವ ಬಗ್ಗೆ ನಮ್ಮ ಜೆಡಿಎಸ್ ಪಕ್ಷದ ವರಿಷ್ಠರರಾದ ದೇವೇಗೌಡರು ಹಾಗೂ ಕೇಂದ್ರ ಸಚಿವರಾದ ಕುಮಾರಣ್ಣ ಅವರ ನಿರ್ದೇಶನ ಪಡೆದುಕೊಂಡು ಮುಂದುವರೆಯುವುದಾಗಿ ಕ್ಷೇತ್ರದ ಶಾಸಕರಾದ ಹೆಚ್.ಟಿ.ಮಂಜು ಅವರು ತಿಳಿಸಿದ್ದಾರೆ. ಸ್ಥಳೀಯ ಮಾಜಿ ಸಚಿವರಾದ ನಾರಾಯಣಗೌಡ ಮತ್ತು ಬಿಜೆಪಿ ರಾಜ್ಯಾಧ್ಯಕ್ಷರಾದ ಬಿ.ವೈ. ವಿಜಯೇಂದ್ರ ಅವರು ಮೈತ್ರಿ ಸಂಬಂಧ ನೀಡಿರುವ ಹೇಳಿಕೆಗಳಿಗೆ ಪ್ರತಿಕ್ರಿಯುವಷ್ಟು ದೊಡ್ಡವನಲ್ಲ ನಾನೊಬ್ಬ ಸಾಮಾನ್ಯ ಶಾಸಕ ಎನ್ನುವ ಮೂಲಕ ಉತ್ತರ ನೀಡಲು ನೀ ರಾ ಕ ರಿ ಸಿ ದ ರು . ಬಿ ಜೆ ಪಿ ಯೊಂ ದಿ ಗೆ ರಾಷ್ಟ್ರೀಯ ಹಾಗೂ ರಾಜ್ಯ ಮಟ್ಟದಲ್ಲಿ ಜೆಡಿಎಸ್-ಬಿಜೆಪಿ ಮೈತ್ರಿ ಗಟ್ಟಿಯಾಗಿದೆ. ಆದರೆ ಸ್ಥಳೀಯವಾಗಿ ಬಿಜೆಪಿಯೊಂದಿಗೆ ಮೈತ್ರಿ ಮಾಡಿಕೊಂಡು ಪುರಸಭೆ, ಗ್ರಾ.ಪಂ, ತಾ.ಪಂ, ಜಿ.ಪಂ ಚುನಾವಣೆಗೆ ಸ್ಪರ್ಧಿಸಬೇಕೋ ಅಥವಾ ಸ್ವತಂತ್ರವಾಗಿ ಸ್ಪರ್ಧಿಸಬೇಕೋ ಎಂಬುದನ್ನು ವರಿಷ್ಠರ ಬಳಿ ಚರ್ಚಿಸಿದ ನಂತರವೇ ವರಿಷ್ಠರ ತೀರ್ಮಾನದಂತೆ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಪ್ರಕ್ರಿಯೆಗೆ ಚಾಲನೆ ನೀಡಲಾಗುವುದು ಎಂದು ಶಾಸಕರು ಸ್ಪಷ್ಟವಾಗಿ ಹೇಳಿದರು.

ಈ ಸಂದರ್ಭದಲ್ಲಿ ಗ್ರಾಮದ ಯಜಮಾನರುಗಳಾದ ಪಟೇಲ್ ನಿಂಗೇಗೌಡ, ರಾಮಕೃಷ್ಣೇಗೌಡ, ನಾಗೇಗೌಡ, ಸೆಕ್ರೆಟರಿ ಚಂದ್ರೇಗೌಡ, ಬಸವೇಗೌಡ, ರಂಗೇಗೌಡ, ರಾಮಕೃಷ್ಣೇಗೌಡ, ರಮೇಶ್, ರಾಜೇಗೌಡ, ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ಅಧ್ಯಕ್ಷ ಕಾಳೇಗೌಡ, ಗ್ರಾ.ಪಂ.ಸದಸ್ಯರಾದ ಅನುರಾಧಾಮಂಜುನಾಥ್, ಸಣ್ಣನೀರಾವರಿ ಇಲಾಖೆಯ ಕಾರ್ಯಪಾಲಕ ಇಂಜಿನಿಯರ್ ನಿರ್ಮಲೇಶ್, ಬಳ್ಳೇಕೆರೆ ಗ್ರಾಮ ಪಂಚಾಯಿತಿ ಪಿಡಿಒ ಪ್ರವೀಣ್, ಮುಖಂಡರಾದ ನಾಟನಹಳ್ಳಿ ಬೋರ್‌ವೆಲ್ ಮಹೇಶ್, ನಾರ್ಗೋನಹಳ್ಳಿ ಸುಧಾಕರ್, ಕೆಂಪಣ್ಣನ ರವಿ, ಕೃಷ್ಣರಾಜಪೇಟೆ ತಾಲ್ಲೂಕಿನ ಮೈಸೂರು ನಿವಾಸಿಗಳ ಸಂಘದ ಕೋಶಾಧ್ಯಕ್ಷ ಕುಮಾರ್ ಸೇರಿದಂತೆ ಹಲವಾರು ಮುಖಂಡರು,

ಗ್ರಾಮಸ್ಥರು, ಯುವ ಮುಖಂಡರು, ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು. ಭೂಮಿಪೂಜೆಗೆ ಶಾಸಕ ಹೆಚ್.ಟಿ.ಮಂಜು ಅವರು ಗ್ರಾಮಕ್ಕೆ ಆಗಮಿಸಿದಾಗ ಗ್ರಾಮದ ಯಜಮಾನರುಗಳು ಹಾಗೂ ಗ್ರಾಮಸ್ಥರು ಶಾಸಕರಿಗೆ ಪುಷ್ಪಮಾಲೆ ಹಾಕಿ ಫಲತಾಂಭೂಲ ನೀಡಿ ಸನ್ಮಾನಿಸುವ ಮೂಲಕ ಅದ್ದೂರಿ ಸ್ವಾಗತ ಕೋರಿದರು. ಶಾಸಕರಿಗೆ ಮಹಿಳೆಯರು ಆರತಿ ಎತ್ತಿ ಹಣೆಗೆ ತಿಲಕವಿಟ್ಟು ಸ್ವಾಗತ ಕೋರಿದರು.

# ಸಚಿವ ಸಂಪುಟದ ಸಭೆಯ ಪ್ರಮುಖ ನಿರ್ಣಯಗಳು



ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತ (KSDL), ಬೆಂಗಳೂರು ಸಂಕೀರ್ಣಕ್ಕೆ ಸಾಬೂನು ತಯಾರಿಸುವ ಯಂತ್ರವನ್ನು ರೂ. 17.70 ಕೋಟಿಗಳ ಅಂದಾಜು ಮೊತ್ತದಲ್ಲಿ ಖರೀದಿಸಲು ಅನುಮೋದನೆ ನೀಡಲಾಗಿದೆ.

ಕೋಲಾರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯಲ್ಲಿ ಸಾರ್ವಜನಿಕ ಖಾಸಗಿ ಸಹಭಾಗಿತ್ವ (PPP) ಮಾದರಿಯಲ್ಲಿ 50 TPD Bio CNG ಘಟಕವನ್ನು ರೂ.24.96 ಕೋಟಿಗಳ ವೆಚ್ಚದಲ್ಲಿ ಸ್ಥಾಪಿಸುವ ಯೋಜನೆಯನ್ನು ಕೈಬಿಟ್ಟು , ಕೋಲಾರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯಲ್ಲಿ ಉತ್ಪತ್ತಿಯಾಗುವ ಹಸಿ ತ್ಯಾಜ್ಯವನ್ನು GAIL ಸಂಸ್ಥೆಯವರು ಕೋಲಾರದಲ್ಲಿ ಸ್ಥಾಪಿಸುತ್ತಿರುವ 150 TPD CBG ಘಟಕಕ್ಕೆ ಪೂರೈಸುವ ಬಗ್ಗೆ ಸಚಿವ ಸಂಪುಟ ಅನುಮೋದನೆ ನೀಡಿದೆ.

ಕಲಬುರಗಿಯಲ್ಲಿ ನೂತನ ಮೆಗಾ ಡೈರಿಯನ್ನು ರೂ. 50.00 ಕೋಟಿಗಳ ಮೊತ್ತದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಅನುದಾನದಿಂದ ನಿರ್ಮಾಣ ಮಾಡಲು ಆಡಳಿತಾತ್ಮಕ ಅನುಮೋದನೆ ನೀಡಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ. ಕಲಬುರಗಿಯಲ್ಲಿ ರೂ.10.00 ಕೋಟಿಗಳ ಮೊತ್ತದಲ್ಲಿ ಪ್ರಾದೇಶಿಕ ಸಹಕಾರ ಭವನವನ್ನು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಅನುದಾನದಿಂದ ನಿರ್ಮಾಣ ಮಾಡಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

PM-ABHIM ಯೋಜನೆಯಡಿ 2024-2026ನೇ ಸಾಲಿನಲ್ಲಿ ರಾಜ್ಯಾದ್ಯಂತ 196 SC-AAM (Rural Health and Wellness Centre) ಗಳನ್ನು ರೂ. 127.40 ಕೋಟಿಗಳ ಅಂದಾಜು ಮೊತ್ತದಲ್ಲಿ ನಿರ್ಮಿಸಲು ದಿನಾಂಕ: 31.12.2025 ರಂದು ಸರ್ಕಾರಿ ಆದೇಶ ಹೊರಡಿಸಿರುವ ಕ್ರಮಕ್ಕೆ ಘಟನೋತ್ತರ ಅನುಮೋದನೆ ನೀಡಲಾಗಿದೆ.

ರಾಜ್ಯದ ವಿವಿಧ ಕೇಂದ್ರ ಕಾರಾಗೃಹಗಳಲ್ಲಿರುವ 33 ಜೀವಾವಧಿ ಶಿಕ್ಷಾ ಬಂದಿಗಳನ್ನು ಸನ್ನಡತೆ ಆಧಾರದ ಮೇಲೆ ಅವಧಿಪೂರ್ವ ಬಿಡುಗಡೆ ಮಾಡಲು ಸಚಿವ ಸಂಪುಟ ಅನುಮೋದನೆ ನೀಡಿದೆ. ಈ ಪೈಕಿ ಇಬ್ಬರು ಶಿಕ್ಷಾ ಬಂದಿಗಳನ್ನು ಕೇಂದ್ರ ಗೃಹ ಮಂತ್ರಾಲಯದ ಸಹಮತಿ ದೊರಕಿದ ನಂತರ ಬಿಡುಗಡೆ ಮಾಡಲು ನಿರ್ಣಯ ಮಾಡಿದೆ.

ಬೆಂಗಳೂರಿನ ಜಯನಗರದಲ್ಲಿ ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯದ 2ನೇ ಹಂತದ ಕಟ್ಟಡ ಕಾಮಗಾರಿಯನ್ನು ರೂ.24.00 ಕೋಟಿಗಳ ಅಂದಾಜು ಮೊತ್ತದಲ್ಲಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

ಹೊಳೆನರಸೀಪುರ ಪಟ್ಟಣದಲ್ಲಿ ತಾಲ್ಲೂಕು ಪಂಚಾಯಿತಿ ಕಛೇರಿ ಕಟ್ಟಡ ನಿರ್ಮಾಣ ಕಾಮಗಾರಿಯ ರೂ. 12.30 ಕೋಟಿಗಳ ಪರಿಷ್ಕೃತ ಅಂದಾಜು ಮೊತ್ತಕ್ಕೆ ಅನುಮೋದನೆ ನೀಡುವ ಬಗ್ಗೆ.

ಭಾರತಿ ಎಜುಕೇಷನ್ ಟ್ರಸ್ಟ್(ರಿ) ಇವರಿಗೆ ಮಂಜೂರು ಮಾಡಿರುವ ಮಂಡ್ಯ ಜಿಲ್ಲೆಯ ಮದ್ದೂರು ತಾಲ್ಲೂಕಿನ ಮೆಳ್ಳಹಳ್ಳಿ ಗ್ರಾಮದ 2.0.26 ರಲ್ಲಿ 17-06 ಎಕರೆ/ಗುಂಟೆ ಜಮೀನಿಗೆ ವಿಧಿಸಿರುವ ಮೊತ್ತವನ್ನು ಪರಿಷ್ಕರಿಸಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ.

ತುಮಕೂರು ಜಿಲ್ಲೆ, ಶಿರಾ ತಾಲ್ಲೂಕು, ಕಲ್ಲುಕೋಟೆ ಗ್ರಾಮದ ಸ.ನಂ.49 ರಲ್ಲಿ 7/2 ಗುಂಟೆ ಜಮೀನನ್ನು ಕಾಂಗ್ರೆಸ್ ಭವನ ನಿರ್ಮಾಣಕ್ಕಾಗಿ "ಕಾಂಗ್ರೆಸ್ ಭವನ ಟ್ರಸ್ಟ್, ಬೆಂಗಳೂರು" ಇವರಿಗೆ ಮಂಜೂರು ಮಾಡಲು ನಿರ್ಣಯಿಸಲಾಯಿತು.

ರಾಯಚೂರು ಜಿಲ್ಲೆ, ಸಿರವಾರ ತಾಲ್ಲೂಕು, ಸಿರವಾರ ಸೀಮಾದ 2.2.39// ರಲ್ಲಿ 10 ಗುಂಟೆ ಜಮೀನನ್ನು ಕಾಂಗ್ರೆಸ್ ಭವನ ನಿರ್ಮಾಣದ ಉದ್ದೇಶಕ್ಕಾಗಿ "ಕಾಂಗ್ರೆಸ್ ಭವನ ಟ್ರಸ್ಟ್, ಬೆಂಗಳೂರು" ಇವರಿಗೆ ಮಂಜೂರು ಮಾಡಲು ಸಚಿವ ಸಂಪುಟ ನಿರ್ಣಯ ಮಾಡಿದೆ.

ಚಾಮರಾಜನಗರ ಜಿಲ್ಲೆಯ ಹಾಗೂ ತಾಲ್ಲೂಕಿನ 166 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ 3 ವರ್ಷಗಳ ಕಾರ್ಯಾಚರಣೆ ಮತ್ತು ನಿರ್ವಹಣೆಯ ಕಾಮಗಾರಿಯನ್ನು ರೂ. 33.04 ಕೋಟಿಗಳ ಅಂದಾಜು ಮೊತ್ತದಲ್ಲಿ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಿದೆ.

ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲ್ಲೂಕಿನ 131 ಗ್ರಾಮಗಳ ಹಾಗೂ ಮಾರ್ಗ ಮಧ್ಯದ 32 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ 3 ವರ್ಷಗಳ ಕಾರ್ಯಾಚರಣೆ ಮತ್ತು ನಿರ್ವಹಣೆಯ ಕಾಮಗಾರಿಯನ್ನು ರೂ. 27.38 ಕೋಟಿಗಳ ಅಂದಾಜು ಮೊತ್ತದಲ್ಲಿ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಯಿತು.

ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲ್ಲೂಕಿನ ಸರಪಾಡಿ ಮತ್ತು ಇತರೆ 95 ಜನವಸತಿ ಪ್ರದೇಶಗಳಿಗೆ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ 5 ವರ್ಷಗಳ ಕಾರ್ಯಾಚರಣೆ ಮತ್ತು ನಿರ್ವಹಣೆಯ ಕಾಮಗಾರಿಯನ್ನು ರೂ. 16.70 ಕೋಟಿಗಳ ಅಂದಾಜು ಮೊತ್ತದಲ್ಲಿ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಯಿತು.

ಕಲಬುರಗಿ ಜಿಲ್ಲೆಯ ಕಲಬುರಗಿ ವಿಶ್ವವಿದ್ಯಾಲಯದ ಆವರಣದಲ್ಲಿ GTTC ಕೇಂದ್ರವನ್ನು ಬಹುಕೌಶಲ್ಯಾಭಿವೃದ್ಧಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ (KKRDB) ಅನುದಾನದಿಂದ ಎರಡನೇ ಹಂತದಲ್ಲಿ ರೂ.66.75 ಕೋಟಿಗಳ ಅಂದಾಜು ವೆಚ್ಚದಲ್ಲಿ ಸ್ಥಾಪಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಯಿತು.

ಹಳಿಯಾಳ ಪಟ್ಟಣಕ್ಕೆ ಒಳಚರಂಡಿ ವ್ಯವಸ್ಥೆ ಕಲ್ಪಿಸುವ ಯೋಜನೆಯಡಿ ನಿರ್ಮಿಸಲಾಗಿರುವ ವಿವಿಧ ಘಟಕಗಳ 5 ವರ್ಷಗಳ ನಿರ್ವಹಣೆ ಮತ್ತು ದುರಸ್ಥಿ ಕಾಮಗಾರಿಯನ್ನು ರೂ.10.60 ಕೋಟಿಗಳ ಅಂದಾಜು ಮೊತ್ತದಲ್ಲಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆಯದೆ ರಚಿಸಿರುವ ಬಡಾವಣೆಗಳಲ್ಲಿನ "ಬಿ-ಖಾತಾ" ನಿವೇಶನ/ಕಟ್ಟಡ/ಅಪಾರ್ಟ್‌ಮೆಂಟ್/ ಫ್ಲಾಟ್‌ಗಳಿಗೆ "ಎ-ಖಾತಾ" ನೀಡಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ.

ಈ ಯೋಜನೆಯಡಿ 10 ಲಕ್ಷ ಆಸ್ತಿಗಳು ಒಳಪಡಲಿವೆ ಎಂದು ಪ್ರವಾಸೋದ್ಯಮ ಮತ್ತು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಹೆಚ್. ಕೆ. ಪಾಟೀಲ್ ತಿಳಿಸಿದರು.

"ಅಕ್ಕಪಡೆ" ಯೋಜನೆಯನ್ನು ಒಳಾಡಳಿತ ಇಲಾಖೆಯ ಸಹಯೋಗದೊಂದಿಗೆ ರಾಜ್ಯದ 31 ಜಿಲ್ಲೆ ಹಾಗೂ 05 ಪೊಲೀಸ್ ಆಯುಕ್ತಾಲಯಗಳಲ್ಲಿ ಅನುಷ್ಠಾನಗೊಳಿಸಲು ಸಚಿವ ಸಂಪುಟ ಸಭೆ ನಿರ್ಣಯಿಸಿದೆ.

"ಗೃಹಲಕ್ಷ್ಮಿ ವಿವಿಧೋದ್ದೇಶ ಸಹಕಾರ ಸಂಘ ನಿಯಮಿತದ ಸ್ಥಾಪನೆ ಹಾಗೂ ಸಂಘದ ಉಪವಿಧಿಗಳಿಗೆ ಅನುಮೋದನೆ ನೀಡುವ ಬಗ್ಗೆ.

"ಕರ್ನಾಟಕ ಗೃಹ ಕಾರ್ಮಿಕರ (ಸಾಮಾಜಿಕ ಭದ್ರತೆ ಮತ್ತು ಕಲ್ಯಾಣ) ವಿಧೇಯಕ, 2026"ಕ್ಕೆ ಸಚಿವ ಸಂಪುಟ ಅನುಮೋದನೆ ನೀಡಿದೆ.

ಉತ್ತರ ಕನ್ನಡ ಜಿಲ್ಲೆಯ ಕುಮಟಾ ತಾಲ್ಲೂಕಿನ ದುಬ್ಬನಶಶಿಯ ಮತ್ತು ಗಂಗೆಕೊಳ್ಳದ ಕಡಲ ತೀರದಲ್ಲಿ ಸಮುದ್ರ ಕೊರೆತ ಪ್ರತಿಬಂಧಕ ಕಾಮಗಾರಿಯ ರೂ.11.03 ಕೋಟಿಗಳ ಪರಿಷ್ಕೃತ ಅಂದಾಜಿಗೆ ಅನುಮೋದನೆ ನೀಡಲಾಗಿದೆ.

ದಕ್ಷಿಣ ಕನ್ನಡ ಜಿಲ್ಲೆ ಉಳ್ಳಾಲ ತಾಲ್ಲೂಕು, ಬಾಳೆಪುಣಿ ಗ್ರಾಮದ ಸ.ನಂ. 87/4ರಲ್ಲಿ 5-00 ಎಕರೆ ಜಮೀನನ್ನು ಎಲೆಕ್ಟ್ರಿಕ್ ಬಸ್‌ಗಳನ್ನು ಕಾರ್ಯಾಚರಿಸಲು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಮಂಗಳೂರು ವಿಭಾಗ ಇವರಿಗೆ ಮಂಜೂರು ಮಾಡಲು ಸಚಿವ ಸಂಪುಟ ಅನುಮೋದನೆ ನೀಡಿದೆ.

ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಉತ್ತರ ತಾಲ್ಲೂಕು, ದಾಸನಪುರ ಹೋಬಳಿ, ರಾವುತ್ತನಹಳ್ಳಿ ಗ್ರಾಮದ ಸ.ನಂ. 57 ಮತ್ತು 58ರಲ್ಲಿನ ಜಮೀನನ್ನು ದಲಿತ ಹಾಗೂ ಹಿಂದುಳಿದ ವರ್ಗಗಳ 22 ಮಠಗಳಿಗೆ ಮಂಜೂರು ಮಾಡಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ.

ಕೊಡಗು ಜಿಲ್ಲೆ, ಮಡಿಕೇರಿ ತಾಲ್ಲೂಕು, ಸಂಪಾಜೆ ಹೋಬಳಿ, ಮದೆ ಗ್ರಾಮದ ಸ.ನಂ. 98/1 ರಲ್ಲಿನ 2.00 ಅಥವಾ 3.00 ಎಕರೆ ಜಮೀನನ್ನು ಅರೆಭಾಷಿಕ ಗೌಡ ಜನಾಂಗಕ್ಕೆ ಸಾಂಸ್ಕೃತಿಕ, ಶೈಕ್ಷಣಿಕ ಮತ್ತು ಕ್ರೀಡಾ ಕೇಂದ್ರ ಸ್ಥಾಪನೆ ಉದ್ದೇಶಕ್ಕೆ "ಕೊಡಗು ಗೌಡ ಸಮಾಜ(ರಿ)" ಇವರಿಗೆ ಮಂಜೂರು ಮಾಡಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ.

ಮೈಸೂರು ಮತ್ತು ಸುತ್ತಮುತ್ತಲಿನ ಭಾಗದ ರೇಷ್ಮೆ ಬೆಳೆಗಾರರಿಗೆ ಅನುಕೂಲವಾಗುವಂತೆ ಮೈಸೂರಿನಲ್ಲಿ ರೇಷ್ಮೆ ಗೂಡಿನ ಮಾರುಕಟ್ಟೆಯನ್ನು ನಬಾರ್ಡ್ ಸಹಯೋಗದಲ್ಲಿ ರೂ.20 ಕೋಟಿಗಳ ಅಂದಾಜು ಮೊತ್ತದಲ್ಲಿ ಸ್ಥಾಪಿಸಲು ಆಡಳಿತಾತ್ಮಕ ಅನುಮೋದನೆ ನೀಡಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ.


ನಂದಿ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಚಿಕ್ಕಬಳ್ಳಾಪುರ ಇಲ್ಲಿನ ನೂತನ ಆಸ್ಪತ್ರೆ ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾಸ್ಪತ್ರೆಗೆ ಅವಶ್ಯವಿರುವ ಯಂತ್ರೋಪಕರಣ ಮತ್ತು ಪೀಠೋಪಕರಣಗಳನ್ನು ರೂ. 40 ಕೋಟಿ ಅನುದಾನದಲ್ಲಿ ಖರೀದಿಸಲು ಆಡಳಿತಾತ್ಮಕ ಅನುಮೋದನೆ ನೀಡಲು ಸಚಿವ ಸಂಪುಟ ನಿರ್ಣಯಿಸಿದೆ .

ಕಲಬುರಗಿ ಮಹಾನಗರ ಪಾಲಿಕೆ ವ್ಯಾಪ್ತಿಯ ವಿವಿಧ ಸ್ಥಳಗಳಲ್ಲಿ ಮಹಾತ್ಮಾ ಗಾಂಧಿ, ಶ್ರೀಮತಿ ಇಂದಿರಾ ಗಾಂಧಿ, ಶ್ರೀ ಜವಾಹರಲಾಲ್ ನೆಹರೂ ಮತ್ತು ಶ್ರೀ ರಾಜೀವ್ ಗಾಂಧಿ ಇವರ ಪುತ್ಥಳಿಗಳನ್ನು ಸ್ಥಾಪಿಸಲು ಸಚಿವ ಸಂಪುಟ ನಿರ್ಧರಿಸಿದೆ.

ನಬಾರ್ಡ್ ಪ್ರಾಯೋಜಿತ ಆರ್.ಐ.ಡಿ.ಎಫ್ ಟ್ರಾಂಚ್ 31ರಡಿ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಮಂಡ್ಯ ಇಲ್ಲಿ ಆಡಳಿತ ಭವನ ನಿರ್ಮಾಣದ ಕಾಮಗಾರಿಯನ್ನು ಲೋಕೋಪಯೋಗಿ ಇಲಾಖೆಯ ಮೂಲಕ ಅನುಷ್ಠಾನಗೊಳಿಸಲು ಅನುಮೋದನೆಯಾಗಿರುವ ರೂ.70.70 ಕೋಟಿ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಲು ಸಚಿವ ಸಂಪುಟ ನಿರ್ಧರಿಸಿದೆ.

## ರಜೆ ಹಾಕಿದ್ದಕ್ಕೆ ಕಾಲೇಜಿನಲ್ಲಿ ಕಿರುಕುಳ ತಾಳಲಾರದೇ ವಿದ್ಯಾರ್ಥಿನಿ ಆತ್ಮಹತ್ಯೆ

**ಆನೇಕಲ್**: ಕಣ್ಣು ನೋವಿನಿಂದ ಕಾಲೇಜಿಗೆ ರಜೆ ಹಾಕಿದ್ದಕ್ಕೆ ಕ್ಲಾಸ್‌ನಲ್ಲಿ ಅವಮಾನ ಮಾಡಿ, ಕಿರುಕುಳ ನೀಡಿದ್ದನ್ನು ತಾಳಲಾರದೇ ಡೆಂಟಲ್ ವಿದ್ಯಾರ್ಥಿನಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಬೆಂಗಳೂರು ಹೊರವಲಯದ ಆನೇಕಲ್ ತಾಲೂಕಿನ ಚಂದಾಪುರದಲ್ಲಿ ನಡೆದಿ ಮೃತಳನ್ನು ಪರಿಮಳ-ಭೋದೆವಯ್ಯ ದಂಪತಿಯ ಮಗಳು ಯಶಸ್ವಿನಿ(23) ಎಂದು ಗುರುತಿಸಲಾಗಿದ್ದು , ಬೊಮ್ಮನಹಳ್ಳಿ ಖಾಸಗಿ ಕಾಲೇಜಿನ ವಿಭಾಗದಲ್ಲಿ 3ನೇ ವರ್ಷದಲ್ಲಿ ವ್ಯಾಸಂಗ ಮಾಡುತ್ತಿದ್ದಳು ಎಂದು ತಿಳಿದುಬಂದಿದೆ.



ಮೃತ ವಿದ್ಯಾರ್ಥಿನಿ ಬುಧವಾರ ಕಣ್ಣು ನೋವಿನಿಂದಾಗಿ ಕಾಲೇಜಿಗೆ ರಜೆ ಹಾಕಿದ್ದರು. ಮಾರನೇ ದಿನ ಕಾಲೇಜಿಗೆ ಹೋದಾಗ ಕಣ್ಣಿಗೆ ಯಾವ ಕಣ್ಣಿನ ಡ್ರಾಪ್ಸ್ ಬಳಸಿದೆ? ಎಷ್ಟು ಹನಿ ಡ್ರಾಪ್ಸ್ ಹಾಕಿಕೊಂಡೆ? ಇಡೀ ಬಾಟಲ್ ಸುರಿದುಕೊಂಡ್ಯಾ ಎಂದು ವಿದ್ಯಾರ್ಥಿಗಳ ಮುಂದೆ ಉಪನ್ಯಾಸಕರು ಅವಮಾನಿಸಿದ್ದರು. ಅದಾದ ಬಳಿಕ ಸೆಮಿನಾರ್‌ಗೆ ಅವಕಾಶ ನೀಡಿರಲಿಲ್ಲ. ಜೊತೆಗೆ ರೆಡಿಯಾಲಜಿ ಕೇಸ್ ಕೂಡ ನೀಡದೇ ಕಿರುಕುಳ ನೀಡಿದ್ದರು ಎಂದು ಆರೋಪ ಕೇಳಿಬಂದಿದೆ.

ಕಾಲೇಜಿಗೆ ರಜೆ ಹಾಕಿದ್ದಕ್ಕೆ ನನ್ನ ಮಗಳಿಗೆ ಅವಮಾನಿಸಿದ್ದಾರೆ. ಅವಳ ಕಣ್ಣಿಗೆ ಗಾಯ ಆಗಿತ್ತು. ಹೀಗಾಗಿ ನನಗೆ ಹೇಳಿಯೇ ರಜೆ ತೆಗೆದುಕೊಂಡಿದ್ದಾಳೆ. ಯಾವ ಡ್ರಾಪ್ಸ್ ಹಾಕಿದೆ ಅಂತೆಲ್ಲ ವಿದ್ಯಾರ್ಥಿಗಳ ಮುಂದೆ ಕೇಳಿ, ಅವಮಾನಿಸಿದ್ದಾರೆ. ಯಾಕೆ ಅವರಿಗೆ ಮಕ್ಕಳು ಇಲ್ವಾ? ಅವಳು ಇದನ್ನೆಲ್ಲ ನನಗೆ ಹೇಳಿದ್ದಾಳೆ. ಉಪನ್ಯಾಸಕರು ಮಾತ್ರವಲ್ಲದೇ ಕಾಲೇಜು ಆಡಳಿತ ಮಂಡಳಿ ಕೂಡ ಕಿರುಕುಳ ನೀಡಿದ್ದಾರೆ.

ಹೀಗಾಗಿ ನನ್ನ ಮಗಳು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ಎಂದು ಮೃತ ವಿದ್ಯಾರ್ಥಿನಿ ತಾಯಿ ಆರೋಪಿಸಿದ್ದಾರೆ. ಟಾರ್ಚರ್ ನೀಡಿದ ಪ್ರಾಂಶುಪಾಲ ಹಾಗೂ ಅವಮಾನಿಸಿದ ಉಪನ್ಯಾಸಕ ವಿರುದ್ಧ ಕ್ರಮ ತೆಗೆದುಕೊಳ್ಳಬೇಕು ಎಂದು ಮೃತ ವಿದ್ಯಾರ್ಥಿನಿಯ ಸಹಪಾಠಿಗಳು ಶವಾಗಾರದ ಮುಂದೆ ಪ್ರತಿಭಟನೆ ನಡೆಸಿದ್ದಾರೆ

## ಇಂದಿನಿಂದ ಜೆಡಿಎಸ್ ಕಾರ್ಯಕರ್ತರ ಸಭೆ



ದೊಡ್ಡಬಳ್ಳಾಪುರ: ಜಾತ್ಯಾತೀತ ಜನತಾದಳ ದೊಡ್ಡಬಳ್ಳಾಪುರ ತಾಲೂಕು ವತಿಯಿಂದ ಜೆಡಿಎಸ್ ಕಾರ್ಯಕರ್ತರ ಸಭೆಯನ್ನು ಜ.10(ಶನಿವಾರ) ರಂದು ದೊಡ್ಡಬಳ್ಳಾಪುರ ನಗರದ ಒಕ್ಕಲಿಗರ ಸಮುದಾಯ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಜೆಡಿಎಸ್ ರಾಜ್ಯ ಪ್ರಧಾನ ಕಾರ್ಯದರ್ಶಿ ಹರೀಶ್ ಗೌಡ ಹೇಳಿದರು.

ದೊಡ್ಡಬಳ್ಳಾಪುರ ತಾಲೂಕಿನಲ್ಲಿ ಜೆಡಿಎಸ್ ಪಕ್ಷದ ಸಂಘಟನೆ ಹಾಗೂ ಬಲವರ್ಧನೆಗಾಗಿ ಕಾರ್ಯಕರ್ತರ ಸಭೆಯನ್ನು ಹಮ್ಮಿಕೊಳ್ಳಲಾಗಿದೆ.. ಮುಖ್ಯ ಅತಿಥಿಗಳಾಗಿ ಕರ್ನಾಟಕ ರಾಜ್ಯ ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷರಾದ ಜೆ.ಕೆ ಕೃಷ್ಣಾರೆಡ್ಡಿ ಭಾಗವಹಿಸಲಿದ್ದಾರೆ ಎಂದರು.

ಸಭೆಯ ಉದ್ದೇಶ ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಗಳ ಪೂರ್ವ ಸಿದ್ಧತೆಯ ಬಗ್ಗೆ ಚರ್ಚೆ, ಹಿತದೃಷ್ಟಿಯಿಂದ ಪಕ್ಷದ ಕಾರ್ಯಕರ್ತರ ಹಾಗೂ ಸ್ಥಳೀಯ ನಾಯಕರ ನಾಡಿಮಿಡಿತವನ್ನು ಅರಿಯುವುದು. ರಾಜ್ಯ ನಾಯಕರ ಮಾರ್ಗದರ್ಶನದಲ್ಲಿ ಪಕ್ಷದ ಮುಂದಿನ ಗುರಿಗಳ ಬಗ್ಗೆ ಚರ್ಚೆ ಮಾಡಲಾಗುತ್ತದೆ. ಆದ್ದರಿಂದ ಪಕ್ಷದ ಎಲ್ಲಾ ಹಿರಿಯ ಮುಖಂಡರು, ಪದಾಧಿಕಾರಿಗಳು, ಕಾರ್ಯಕರ್ತರು ಭಾಗವಹಿಸಬೇಕು ಎಂದು ಮನವಿ ಮಾಡಿದರು ಎಂದು ಹೇಳಿದರು. ಎನ್ ಡಿಎ ಆದ ಮೇಲೆ ನಮ್ಮ ತಾಲೂಕಿನಲ್ಲಿ ಪಕ್ಷ ಯಾವ ಸ್ಥಿತಿಯಲ್ಲಿದೆ ಎಂಬ ತಿಳಿಯಲು ಸಭೆಯನ್ನ ಆಯೋಜನೆ ಮಾಡಲಾಗಿದೆ. ಜಾಲಪ್ಪನವರು ಪಕ್ಷದಿಂದ ಹೋದಾಗಿನಿಂದ ತಾಲೂಕಿನಲ್ಲಿ ಜೆಡಿಎಸ್ ಪಕ್ಷ ಅಧಿಕಾರ ಚುಕ್ಕಾಣಿ ಹಿಡಿಯಲು ಆಗುತ್ತಿಲ್ಲ. ಅದಕ್ಕೆ ಕಾರಣಗಳನ್ನು ಹುಡುಕಲು ಸಭೆ ಕರೆಯಲಾಗಿದೆ. ಈ ಸಭೆ ಬಲ ಪ್ರದರ್ಶನ ಸಭೆಯಲ್ಲ, ಕಾರ್ಯಕರ್ತರ ಸಭೆ ಇದು ಎಂದು ಹೇಳಿದರು.. ಈ ವೇಳೆ ನಗರಸಭೆ ಸದಸ್ಯರಾದ ತಾ.ನ ಪ್ರಭುದೇವ್, ವಡ್ಡರಹಳ್ಳಿ ರವಿ, ಡಾ. ವಿಜಯ್ ಕುಮಾರ್, ಪಿಎಲ್ ಡಿ ಬ್ಯಾಂಕ್ ಉಪಾಧ್ಯಕ್ಷ ರಾಮಚಂದ್ರಬಾಬು, ಕೆಂಪರಾಜು, ಸತ್ಯನಾರಾಯಣ, ಶಾಂತಮ್ಮ ಸೇರಿದಂತೆ ಇತರರು ಉಪಸ್ಥಿತರಿದ್ದರು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

## ಜೆಡಿಎಸ್ ಶಕ್ತಿ ಪ್ರದರ್ಶನ: 2 ಲಕ್ಷಕ್ಕೂ ಅಧಿಕ ಜನ ಭಾಗವಹಿಸುವ ನಿರೀಕ್ಷೆ



**ಹಾಸನ:** ಜಾತ್ಯಾತೀತ ಜನತಾದಳ (ಜೆಡಿಎಸ್) ಪಕ್ಷದ ವತಿಯಿಂದ ಜನವರಿ 24ರಂದು ಹಾಸನದಲ್ಲಿ ಬೃಹತ್ ಸಮಾವೇಶವನ್ನು ಆಯೋಜಿಸಲಾಗಿದ್ದು, ಈ ಸಮಾವೇಶಕ್ಕೆ ಸುಮಾರು 2 ಲಕ್ಷಕ್ಕೂ ಅಧಿಕ ಕಾರ್ಯಕರ್ತರು ಮತ್ತು ಬೆಂಬಲಿಗರು ಭಾಗವಹಿಸುವ ನಿರೀಕ್ಷೆಯಿದೆ. ಈ ಕುರಿತು ಜೆಡಿಎಸ್ ಹಾಸನ ಜಿಲ್ಲಾ ಘಟಕದ ಮಾಜಿ ಶಾಸಕ ಹಾಗೂ ಜಿಲ್ಲಾಧ್ಯಕ್ಷ ಕೆ.ಎಸ್. ಲಿಂಗೇಶ್ ಅವರು ಮಾಹಿತಿ ನೀಡಿದರು.

ನಗರದಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜೆಡಿಎಸ್ ಪಕ್ಷದ ಶಕ್ತಿಯನ್ನು ರಾಜ್ಯಮಟ್ಟದಲ್ಲಿ ಮತ್ತೊಮ್ಮೆ ಪ್ರದರ್ಶಿಸುವ ಉದ್ದೇಶದಿಂದ ಈ ಬೃಹತ್ ಸಮಾವೇಶವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು. ಸಮಾವೇಶವು ಜನವರಿ 24ರಂದು ಮಧ್ಯಾಹ್ನ 1 ಗಂಟೆಗೆ ಹಾಸನದಲ್ಲಿ ನಡೆಯಲಿದ್ದು, ಮಾಜಿ ಸಚಿವ ಹಾಗೂ ಶಾಸಕರಾದ ಹೆಚ್.ಡಿ. ರೇವಣ್ಣ ಅವರ ಅಧ್ಯಕ್ಷತೆಯಲ್ಲಿ ಕಾರ್ಯಕ್ರಮ ನಡೆಯಲಿದೆ ಎಂದರು.

ಈ ಸಮಾವೇಶಕ್ಕೆ ಜೆಡಿಎಸ್ ಪಕ್ಷದ ವರಿಷ್ಠ ನಾಯಕ, ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ, ಕೇಂದ್ರದ ಉಕ್ಕು ಮತ್ತು ಭಾರಿ ಕೈಗಾರಿಕಾ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಸೇರಿದಂತೆ ಪಕ್ಷದ ಹಲವು ಹಿರಿಯ ನಾಯಕರು, ಶಾಸಕರು, ಮಾಜಿ ಶಾಸಕರು ಹಾಗೂ ರಾಜ್ಯಮಟ್ಟದ ಪ್ರಮುಖ ಮುಖಂಡರು ಭಾಗವಹಿಸಲಿದ್ದಾರೆ ಎಂದು ಲಿಂಗೇಶ್ ಹೇಳಿದರು. ಸುಮಾರು 2 ಲಕ್ಷಕ್ಕೂ ಅಧಿಕ ಜನರು ಸಮಾವೇಶದಲ್ಲಿ ಭಾಗವಹಿಸುವ ನಿರೀಕ್ಷೆ ಇದ್ದು, ಅದಕ್ಕೆ ತಕ್ಕಂತೆ ಎಲ್ಲಾ ರೀತಿಯ ಸಿದ್ಧತೆಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಅವರು ಹೇಳಿದರು.

ಸಮಾವೇಶ ಯಶಸ್ವಿಯಾಗಲು ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ಪೂರ್ವಭಾವಿ ಸಭೆಗಳನ್ನು ಆಯೋಜಿಸಲಾಗಿದೆ. ಈ ಸಭೆಗಳ ಮೂಲಕ ಕಾರ್ಯಕರ್ತರನ್ನು ಒಗ್ಗೂಡಿಸಿ, ಸಮಾವೇಶದ ಮಹತ್ವವನ್ನು ತಿಳಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಜನವರಿ 11ರಂದು ಬೆಳಿಗ್ಗೆ 10.30ಕ್ಕೆ ಬೇಲೂರು ತಾಲೂಕಿನಲ್ಲಿ ಹಾಗೂ ಅದೇ ದಿನ ಮಧ್ಯಾಹ್ನ 3 ಗಂಟೆಗೆ ಚನ್ನರಾಯಪಟ್ಟಣದಲ್ಲಿ ಪೂರ್ವಭಾವಿ ಸಭೆ ನಡೆಯಲಿದೆ.

ಅದೇ ರೀತಿ, ಜನವರಿ 12ರಂದು ಬೆಳಿಗ್ಗೆ 10 ಗಂಟೆಗೆ ಹೊಳೆನರಸೀಪುರದಲ್ಲಿ ಹಾಗೂ ಮಧ್ಯಾಹ್ನ 2 ಗಂಟೆಗೆ ಸಕಲೇಶಪುರದಲ್ಲಿ ಸಭೆಗಳನ್ನು ಆಯೋಜಿಸಲಾಗಿದೆ. ಜನವರಿ 13ರಂದು ಬೆಳಿಗ್ಗೆ 10 ಗಂಟೆಗೆ ಆಲೂರು ತಾಲೂಕಿನಲ್ಲಿ ಪೂರ್ವಭಾವಿ ಸಭೆ ನಡೆಯಲಿದೆ ಎಂದು ವಿವರಿಸಿದರು.

ಇನ್ನೂ ಜನವರಿ 17ರಂದು ಬೆಳಿಗ್ಗೆ 10 ಗಂಟೆಗೆ ಅರಕಲಗೂಡು ತಾಲೂಕಿನಲ್ಲಿ ಹಾಗೂ ಮಧ್ಯಾಹ್ನ 3 ಗಂಟೆಗೆ ಅರಸೀಕೆರೆಯಲ್ಲಿ ಸಭೆ ನಡೆಯಲಿದೆ. ಅಂತಿಮವಾಗಿ ಜನವರಿ 19ರಂದು ಬೆಳಿಗ್ಗೆ 10 ಗಂಟೆಗೆ ಹಾಸನ ನಗರದಲ್ಲಿ ಜಿಲ್ಲಾ ಮಟ್ಟದ ಪೂರ್ವಭಾವಿ ಸಭೆಯನ್ನು ಆಯೋಜಿಸಲಾಗಿದ್ದು, ಈ ಸಭೆಯಲ್ಲಿ ಸಮಾವೇಶದ ಅಂತಿಮ ರೂಪುರೇಷೆಗಳನ್ನು ಚರ್ಚಿಸಲಾಗುತ್ತದೆ ಎಂದು ಲಿಂಗೇಶ್ ಹೇಳಿದರು.

ಈ ಬೃಹತ್ ಸಮಾವೇಶದಲ್ಲಿ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರಿಗೆ ವಿಶೇಷ ಗೌರವ ಸನ್ಮಾನವನ್ನು ಮಾಡಲಾಗುವುದು. ಕೇಂದ್ರ ಸರ್ಕಾರದಲ್ಲಿ ಉಕ್ಕು ಮತ್ತು ಭಾರಿ ಕೈಗಾರಿಕಾ ಸಚಿವರಾಗಿ ಜವಾಬ್ದಾರಿಯನ್ನು ವಹಿಸಿಕೊಂಡಿರುವ ಹಿನ್ನೆಲೆಯಲ್ಲಿ, ಅವರ ಸಾಧನೆ ಹಾಗೂ ಪಕ್ಷಕ್ಕೆ ನೀಡುತ್ತಿರುವ ನಾಯಕತ್ವವನ್ನು ಗೌರವಿಸಿ ಈ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಅವರು ತಿಳಿಸಿದರು.

## ಹಣಕಾಸು ಇಲಾಖೆ ಅನುಮತಿ ನೀಡಿದ ತಕ್ಷಣ ಫೆಬ್ರವರಿ, ಮಾರ್ಚ್ ತಿಂಗಳ ಹಣ: ಲಕ್ಷ್ಮೀ ಹೆಬ್ಬಾಳ್ಕರ್

**ಬೆಂಗಳೂರು**: ಹಣಕಾಸು ಇಲಾಖೆಯವರು ಅನುಮತಿ ನೀಡಿದ ತಕ್ಷಣವೇ 2025ರ ಫೆಬ್ರವರಿ ಹಾಗೂ ಮಾರ್ಚ್ ತಿಂಗಳ ಗೃಹಲಕ್ಷ್ಮೀ ಯೋಜನೆಯ ಹಣವನ್ನು ಫಲಾನುಭವಿಗಳ ಖಾತೆಗೆ ಜಮಾ ಮಾಡಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು.

ಸಚಿವ ಸಂಪುಟ ಸಭೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಈ ಎರಡು ತಿಂಗಳ ಗೃಹಲಕ್ಷ್ಮೀ ಯೋಜನೆ ಹಣ ಬಿಡುಗಡೆ ಕುರಿತಂತೆ ಈಗಾಗಲೇ ಮುಖ್ಯಮಂತ್ರಿಗಳ ಬಳಿ ಮಾತನಾಡಿದ್ದು, ಈ ಬಗ್ಗೆ ಮುಖ್ಯಮಂತ್ರಿಗಳು ಕೂಡ ಸದನದಲ್ಲಿ ಉತ್ತರ ಕೊಟ್ಟಿದ್ದಾರೆ ಎಂದರು. ಅನರ್ಹ ರೇಷನ್ ಕಾರ್ಡ್ ರದ್ದಾಗಿರುವ ಕಾರಣ ಕೆಲವರಿಗೆ ಹಣ ಸಂದಾಯವಾಗಿಲ್ಲ. ಆಹಾರ ಇಲಾಖೆಯಿಂದ ಹೊಸ ಡೇಟಾ ಬಂದ ತಕ್ಷಣ ಅವರಿಗೂ ದುಡ್ಡು ರಿಲೀಸ್ ಆಗಲಿದೆ. ರೇಷನ್ ಕಾರ್ಡ್ ಆಧರಿಸಿ ನಾವು ಗೃಹಲಕ್ಷ್ಮಿ ಫಲಾನುಭವಿಗಳಿಗೆ ದುಡ್ಡು ಹಾಕುತ್ತಿದ್ದೇವೆ. ಕೆಲ ರೇಷನ್ ಕಾರ್ಡ್ ರದ್ದಾದಾಗ ದುಡ್ಡು ಹೋಲ್ಡ್ ಆಗಿರಬಹುದು. ಆದರೆ ಅವರು ತೆರಿಗೆ ಪಾವತಿದಾರರಲ್ಲದಿದ್ದಲ್ಲಿ ಹಣ ಸಿಗಲಿದೆ ಎಂದು ಸಚಿವರು ಸ್ಪಷ್ಟಪಡಿಸಿದರು ಗೃಹಲಕ್ಷ್ಮೀ ಸಹಕಾರ ಸಂಘಕ್ಕೆ ಸದಸ್ಯರಾದವರು ಪ್ರತಿ ತಿಂಗಳು 200 ರೂಪಾಯಿ ಹಣ ಕಟ್ಟಿಕೊಂಡು ಹೋಗಬೇಕು, 6 ತಿಂಗಳು ಆದ ಬಳಿಕ ಸಾಲ ಸೌಲಭ್ಯ ಪಡೆಯಲು ಅರ್ಹರಾಗುತ್ತಾರೆ. ನನ್ನ ಅಧ್ಯಕ್ಷತೆಯಲ್ಲಿ ಒಂದು ಸಮಿತಿ ಇದ್ದು, ಹೆಚ್ಚು ಕಂಡೀಷನ್‌ಗಳನ್ನು ಹಾಕದೇ ಅರ್ಹರನ್ನು ಗುರುತಿಸಿ ಸಾಲ ನೀಡಲಾಗುವುದು. ಜೊತೆಗೆ ಆರೋಗ್ಯ ವಿಮೆಯನ್ನು ನೀಡುವ ಯೋಚನೆ ಇದೆ ಎಂದು ಸಚಿವರು ಹೇಳಿದರು.



ನಮ್ಮ ಇಲಾಖೆ ಹಾಗೂ ಗೃಹ ಇಲಾಖೆ ಸಹಯೋಗದಲ್ಲಿ ಅಕ್ಕ ಪಡೆ ಆರಂಭಿಸಲಾಗಿದೆ. ಬಹಳಷ್ಟು ಮಹಾತ್ವಾಕಾಂಕ್ಷಿ ಇಟ್ಟುಕೊಂಡು ಅಕ್ಕಪಡೆ ಆರಂಭಿಸಲಾಗಿದೆ. ಈಗಾಗಲೇ ಸಿಬ್ಬಂದಿ ನೇಮಿಸಿದ್ದು, ಅವರಿಗೆ ತರಬೇತಿ ನೀಡಲಾಗುತ್ತಿದೆ. ಬಸ್ ಸ್ಟಾಪ್, ದೇವಸ್ಥಾನ, ಮಾಲ್‌ಗಳಲ್ಲಿ, ಪಾರ್ಕ್‌ಗಳಲ್ಲಿ ಅಕ್ಕ ಪಡೆ ಗಸ್ತು ತಿರುಗಲಿದೆ ಎಂದು ಸಚಿವರು ಹೇಳಿದರು. ಅಕ್ಕಪಡೆ ಸ್ಕೂಲ್, ಕಾಲೇಜುಗಳಿಗೂ ಹೋಗಿ ಜಾಗೃತಿ ಮೂಡಿಸುವ ಕೆಲಸ ಮಾಡಲಿದ್ದು, ದೂರು ಕೊಡಲು ಅಂಜುವ ಹೆಣ್ಣುಮಕ್ಕಳ ಹೆಸರನ್ನು ಗೌಪ್ಯವಾಗಿ ಇಡಲಾಗುವುದು. ಅಕ್ಕಪಡೆ ಬಗ್ಗೆ ಸಚಿವ ಸಂಪುಟ ಸಭೆಯಲ್ಲಿ ಸುದೀರ್ಘವಾಗಿ ಚರ್ಚೆ ನಡೆಸಲಾಗಿದೆ, ಸಾಮಾಜಿಕ ಜಾಲತಾಣಗಳಲ್ಲಿ ವಂಚನೆಗೊಳಗಾದ ಮಹಿಳೆಯರು, ಕೌಟುಂಬಿಕ ಸಮಸ್ಯೆ ಎದುರಿಸುತ್ತಿರುವ ಹೆಣ್ಣುಮಕ್ಕಳು ಸಹ ದೂರು ನೀಡಬಹುದು ಎಂದು ಹೇಳಿದರು. ಹುಬ್ಬಳ್ಳಿಯಲ್ಲಿ ಮಹಿಳೆ ವಿವಸ್ತ್ರ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿದ ಸಚಿವರು, ಯಾರೇ ತಪ್ಪು ಮಾಡಿರಲಿ, ತಪ್ಪಿತಸ್ಥರಿಗೆ ಶಿಕ್ಷೆಯಾಗಲಿ ಎಂಬುದೇ ನನ್ನ ಕೋರಿಕೆ ಎಂದರು

## ಪಾಕಿಸ್ತಾನ ಜಿಂದಾಬಾದ್ ಎಂದು ಉರ್ದುವಿನಲ್ಲಿ ಬರೆದಿರುವ ಬಲೂನ್ ಪತ್ತೆ



**ಶ್ರೀನಗರ:** ಜಮ್ಮು ಮತ್ತು ಕಾಶ್ಮೀರ ದ ಸಾಂಬಾದಲ್ಲಿ ಉರ್ದುವಿನಲ್ಲಿ ಪಾಕಿಸ್ತಾನ ಜಿಂದಾಬಾದ್ ಎಂದು ಬರೆದಿರುವ ಬಲೂನ್ ಪತ್ತೆಯಾಗಿದೆ. ಸಾಂಬಾ ಜಿಲ್ಲೆಯ ರಾಮಗಢ ಪ್ರದೇಶದ ಖಾನ್‌ಪುರ ಗ್ರಾಮದ ಹೊಲದಲ್ಲಿ ಗುರುವಾರ ಅನುಮಾನಾಸ್ಪದ ಬಲೂನೊಂದು ಪತ್ತೆಯಾಗಿದ್ದು, ಇದು ಪೊಲೀಸರ ತನಿಖೆಗೆ ಕಾರಣವಾಗಿದೆ. ಉರ್ದು ಭಾಷೆಯಲ್ಲಿ ಪಾಕಿಸ್ತಾನ ಜಿಂದಾಬಾದ್ ಎಂದು ಬರೆದಿದ್ದ ಬಲೂನನ್ನು ಸ್ಥಳೀಯ ನಿವಾಸಿಯೊಬ್ಬರು ನೋಡಿದ್ದರು ಕೂಡಲೇ ರಾಮಘಡ ಪೊಲೀಸರಿಗೆ ಮಾಹಿತಿ ನೀಡಿದ್ದರು.

ಪೊಲೀಸರು ಬಲೂನನ್ನು ವಶಕ್ಕೆ ಪಡೆದಿದ್ದು, ಹೆಚ್ಚಿನ ಪರಿಶೀಲನೆ ನಡೆಯುತ್ತಿದೆ ಎಂದು ಹೇಳಿದರು. ಬಲೂನ್ ಪ್ರಸ್ತುತ ರಾಮಗಢ ಪೊಲೀಸ್ ಠಾಣೆಯಲ್ಲಿದ್ದು, ಅಧಿಕಾರಿಗಳು ನಿವಾಸಿಗಳು ಜಾಗರೂಕರಾಗಿರಿ ಮತ್ತು ಅಂತಹ ಯಾವುದೇ ವಸ್ತುಗಳು ಕಂಡುಬಂದರೆ ತಕ್ಷಣ ವರದಿ ಮಾಡುವಂತೆ ಸೂಚಿಸಿದ್ದಾರೆ.

ಸಾಂಬಾ ಜಿಲ್ಲೆಯ ಕಟ್ಟಿ ಪ್ರದೇಶದಲ್ಲಿ ಶಂಕಿತ ವ್ಯಕ್ತಿಯೊಬ್ಬ ಶಸ್ತ್ರಾಸ್ತ್ರ ಹೊತ್ತುಕೊಂಡು ಹೋಗುತ್ತಿರುವುದನ್ನು ನೋಡಿರುವುದಾಗಿ ಸ್ಥಳೀಯ ನಿವಾಸಿಯೊಬ್ಬರು ಹೇಳಿದ್ದರು, ಭದ್ರತಾ ಪಡೆಗಳು ಪ್ರತ್ಯೇಕವಾಗಿ ಶೋಧ ಕಾರ್ಯಾಚರಣೆಯನ್ನು ಪ್ರಾರಂಭಿಸಿವೆ. ಏತನ್ಮಧ್ಯೆ, ಜಮ್ಮು ಮತ್ತು ಕಾಶ್ಮೀರದ ಕಥುವಾ ಜಿಲ್ಲೆಯ ಕಾಡಿನಲ್ಲಿ ಅಡಗಿರುವ ಭಯೋತ್ಪಾದಕರನ್ನು ಪತ್ತೆಹಚ್ಚಲು ಗುರುವಾರ ಬೆಳಗ್ಗೆ ಭದ್ರತಾ ಪಡೆಗಳು ಶೋಧ ಕಾರ್ಯಾಚರಣೆಯನ್ನು ಪುನರಾರಂಭಿಸಿವೆ. ಬುಧವಾರ ಪಡೆಗಳು ಮತ್ತು ಭಯೋತ್ಪಾದಕರ ನಡುವೆ ನಡೆದ ಗುಂಡಿನ ಚಕಮಕಿಯಲ್ಲಿ ಒಬ್ಬ ಭದ್ರತಾ ಸಿಬ್ಬಂದಿಗೆ ಸಣ್ಣಪುಟ್ಟ ಗಾಯಗಳಾಗಿವೆ.

ಜಮ್ಮು ಮತ್ತು ಕಾಶ್ಮೀರ ಪೊಲೀಸ್ ಮತ್ತು ಇತರ ಭದ್ರತಾ ಪಡೆಗಳ ವಿಶೇಷ ಕಾರ್ಯಾಚರಣೆ ಗುಂಪು (ಎಸ್‌ಒಜಿ) ಬುಧವಾರ ಸಂಜೆ ಬಿಲ್ಲಾವರ್‌ನ ಕಹೋಗ್ ಗ್ರಾಮದಲ್ಲಿ ಕಾರ್ಯಾಚರಣೆ ಆರಂಭಿಸಿದ್ದು, ಬಳಿಕ ಎನ್‌ಕೌಂಟರ್ ಕೂಡ ನಡೆದಿತ್ತು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಮೊಸಳೆಗೆ ಆಹಾರ ಕೊಡ್ಬೇಡಿ ಎಂದಿದ್ದಕ್ಕೆ ಎಸಿಎಫ್ ಹತ್ಯೆ

**ಕಾರವಾರ:** ಉತ್ತರ ಕನ್ನಡ ಜಿಲ್ಲೆಯ ದಾಂಡೇಲಿಯಲ್ಲಿ 2012ರಲ್ಲಿ ನಡೆದಿದ್ದ ಎಸಿಎಫ್ ಮದನ್ ನಾಯ್ಕ್ ಹತ್ಯೆ ಪ್ರಕರಣದ ಅಪರಾಧಿಗೆ ಯಲ್ಲಾಪುರ ಸಂಚಾರಿ ನ್ಯಾಯಾಲಯ ಶಿಕ್ಷೆ ಪ್ರಕಟಿಸಿದೆ. 2012ರಲ್ಲಿ ಈ ಕೊಲೆಯಾಗಿದ್ದು, 14 ವರ್ಷದ ನಂತರ ಈ ತೀರ್ಪು ಬಂದಿದೆ. ಹತ್ಯೆ ಮಾಡಿದ್ದ ಪ್ರಶಾಂತ್ ರಾಮು ಲಂಬಾಣಿಗೆ 10 ವರ್ಷ ಜೈಲು, 11,000 ರೂ. ದಂಡ, ಆನಂದ್ ರೂಪಸಿಂಗ್ ನಾಯ್ಕ, ಸುರೇಶ್ ಶಂಕರಪ್ಪ ನಾಯ್ಕ, ಶೈಲಜಾ , ದಾನಾಬಾಯಿ, ಮಾದುರೀ ರಾಥೋಡ್, ರಾಧ ನಾಯ್ಕಗೆ ತಲಾ ಒಂದು ಸಾವಿರ ರೂ. ದಂಡ ವಿಧಿಸಲಾಗಿದೆ. ಜೊತೆಗೆ ಎಸಿಎಫ್ ಕುಟುಂಬ ಅವಲಂಭಿತರಾದ ಪತ್ನಿ, ಪುತ್ರ, ಪುತ್ರಿಗೆ 50,000 ರೂ. ಪರಿಹಾರ ನೀಡುವಂತೆ ಯಲ್ಲಾಪುರ ಸಂಚಾರಿ ನ್ಯಾಯಲಯದ ನ್ಯಾಯಾದೀಶ ಕಿರಣ್ ಕಿಣಿಯವರು ಆದೇಶಿಸಿದ್ದಾರೆ. ಸರ್ಕಾರದ ಪರ ಶಿರಸಿಯ ರಾಜೇಶ್ ಮಾಳಗೇಕರ್ ವಾದ ಮಂಡಿಸಿದ್ದರು. ಏನಿದು ಪ್ರಕರಣ ದಾಂಡೇಲಿ ಮೊಸಳೆ ಪಾರ್ಕ್‌ನಲ್ಲಿ ಬಾಗಲಕೋಟೆಯಿಂದ ಪ್ರವಾಸಕ್ಕೆ ಬಂದಿದ್ದ ಪ್ರವಾಸಿಗರು ಮೊಸಳೆಗಳಿಗೆ ಮಾಂಸವನ್ನು ಹಾಕುತಿದ್ದರು. ಈ ವೇಳೆ ಇಲ್ಲಿನ ಅರಣ್ಯ ಇಲಾಖೆಯ ಎಸಿಎಫ್ ಆಗಿದ್ದ ಮದನ್ ನಾಯ್ಕ್ ರವರು ಪ್ರವಾಸಿಗರಿಗೆ ಮೊಸಳೆಗೆ ಮಾಂಸ ಹಾಕದಂತೆ ತಿಳಿ ಹೇಳಿದ್ದರು. ಇದರಿಂದ ಕೆರಳಿದ ಪ್ರವಾಸಿಗರು ಎಸಿಎಫ್ ಮೇಲೆ ಮಾರಣಾಂತಿಕ ಹಲ್ಲೆ ಮಾಡಿದ್ದರು. ಹಲ್ಲೆಯಿಂದ ತಲೆಗೆ ಗಂಭೀರ ಗಾಯವಾಗಿತ್ತು. ಎಸಿಎಫ್ ಮದನ್ ನಾಯ್ಕ್ ಮೃತಪಟ್ಟಿದ್ದರು. ಈ ಕುರಿತು ಅವರ ಪತ್ನಿ ಸುಮತಿ ದೂರು ನೀಡಿದ್ದರು. ಹಲ್ಲೆ ಮಾಡಿದವರೆಲ್ಲರೂ ಸರ್ಕಾರಿ ನೌಕರರಾಗಿದ್ದು, ಪೊಲೀಸ್ ತನಿಖೆಯಲ್ಲೂ ಪ್ರಭಾವ ಬೀರಿದ್ದರು. ಈ ಹಿನ್ನಲೆಯಲ್ಲಿ ರಾಜ್ಯ ಸರ್ಕಾರ ಈ ಪ್ರಕರಣವನ್ನು ಸಿ.ಐ.ಡಿಗೆ ವಹಿಸಿತ್ತು.

## ಕೇಂದ್ರೀಯ ವಿದ್ಯಾಲಯಕ್ಕೆ ಬಾಂಬ್ ಬೆದರಿಕೆ; RDX ಮೂಲಕ ಸ್ಫೋಟಿಸುವುದಾಗಿ ಇಮೇಲ್

**ಬೆಂಗಳೂರು:** ಇತ್ತೀಚೆಗಷ್ಟೇ ಕೋಲಾರ ಸೇರಿದಂತೆ ಮೈಸೂರು, ಬಾಗಲಕೋಟೆ, ಧಾರವಾಡ ಮತ್ತು ಗದಗ ಕೋರ್ಟ್‌ಗಳನ್ನ ಸ್ಫೋಟಿಸೋದಾಗಿ ಹುಸಿ ಬಾಂಬ್ ಬೆದರಿಕೆ ಬಂದಿತ್ತು. ಅಷ್ಟೇ ಅಲ್ಲದೆ ಲಾಲ್‌ಬಾಗ್ ರಸ್ತೆಯಲ್ಲಿರುವ ಪಾಸ್‌ಪೋರ್ಟ್ ಕಚೇರಿ ಸ್ಫೋಟಿಸೋದಾಗಿ ಕೂಡ ಬೆದರಿಕೆ ಹಾಕಲಾಗಿತ್ತು. ಇದೀಗ ಹೆಬ್ಬಾಳದ ಕೇಂದ್ರೀಯ ವಿದ್ಯಾಲಯಕ್ಕೆ ಬಾಂಬ್ ಬೆದರಿಕೆ ಬಂದಿದೆ.

3 ಆರ್‌ಡಿಎಕ್ಸ್ ಇಟ್ಟಿದ್ದಾಗಿ ವಿದ್ಯಾಲಯದ ಇ-ಮೇಲ್ ಐಡಿಗೆ ಕಿಡಿಗೇಡಿಗಳು ಸಂದೇಶ ರವಾನಿಸಿದ್ದಾರೆ. ಪ್ರಾಂಶುಪಾಲರಿಂದ ಸದಾಶಿವನಗರ ಠಾಣೆಗೆ ದೂರು ವಿದ್ಯಾಲಯಕ್ಕೆ ಬಾಂಬ್ ಬೆದರಿಕೆ



ಇ-ಮೇಲ್ ಬರುತ್ತಿದ್ದಂತೆ ಕಾಲೇಜಿನ ಪ್ರಾಂಶುಪಾಲ ಪಿ.ಎಂ.ಪ್ರಕಾಶ್ ಅವರು ಬೆಂಗಳೂರಿನ ಸದಾಶಿವನಗರ ಠಾಣೆಗೆ ದೂರು ನೀಡಿದ್ದಾರೆ. ಕೂಡಲೇ ಸ್ಥಳಕ್ಕೆ ಆಗಮಿಸಿದ ಪೊಲೀಸರು ಪರಿಶೀಲನೆ ಮಾಡಿದ್ದಾರೆ. ಈ ವೇಳೆ ಯಾವುದೇ ಆರ್‌ಡಿಎಕ್ಸ್ ಬಾಂಬ್ ಪತ್ತೆಯಾಗಿಲ್ಲ. ಹೀಗಾಗಿ ಇದೊಂದು ಹುಸಿ ಬಾಂಬ್ ಬೆದರಿಕೆ ಅನ್ನೋದು ಮೇಲ್ನೋಟಕ್ಕೆ ಪತ್ತೆ ಆಗಿದೆ. ಸದ್ಯ ಸದಾಶಿವನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ರಾಜ್ಯದ 5 ಕೋರ್ಟ್ ಸ್ಫೋಟಿಸೋದಾಗಿ ಬೆದರಿಕೆ ಇಮೇಲ್ ಇತ್ತೀಚೆಗೆ ರಾಜ್ಯದ 5 ಕೋರ್ಟ್‌ಗಳಿಗೆ ಬಾಂಬ್ ಸ್ಫೋಟದ ಬೆದರಿಕೆ ಸಂದೇಶ ಬಂದಿತ್ತು. ಮೈಸೂರಿನ ಹಳೇ ಕೋರ್ಟ್‌ನ ಮಧ್ಯಾಹ್ನ 1.55ಕ್ಕೆ ಸ್ಫೋಟಿಸೋದಾಗಿ ಇ-ಮೇಲ್ ಬಂದಿತ್ತು. ತಕ್ಷಣವೇ ಎಚ್ಚೆತ್ತ ನ್ಯಾಯಾಧೀಶರು, ವಕೀಲರು ಕೋರ್ಟ್ ಆವರಣದಿಂದ ಹೊರ ಬಂದಿದ್ದರು. ಇಷ್ಟೇ ಅಲ್ಲ ಧಾರವಾಡ ಹೈಕೋರ್ಟ್, ಬಾಗಲಕೋಟ, ಗದಗ ಹಾಗೂ ಹಾಸನ ಜಿಲ್ಲಾ ನ್ಯಾಯಾಲಯ ಕೂಡ ಸ್ಫೋಟಿಸುವ ಬಗ್ಗೆ ಬೆದರಿಕೆ ಇಮೇಲ್ ಬಂದಿದ್ದವು. ಪೊಲೀಸರು ತಪಾಸಣೆ ಮಾಡಿದರೂ ಒಂದೇ ಒಂದು ಸ್ಫೋಟದ ವಸ್ತುಗಳು ಸಿಕ್ಕಿಲ್ಲ. ಇನ್ನು ಬೆಂಗಳೂರಿನ ಕೋರಮಂಗಲದ ಪಾಸ್‌ಪೋರ್ಟ್ ಕಚೇರಿ ಸ್ಫೋಟಿಸೋದಾಗಿ ಕೂಡ ಇತ್ತೀಚೆಗೆ ಇಮೇಲ್‌ನಲ್ಲಿ ಬೆದರಿಕೆ ಸಂದೇಶ ಬಂದಿತ್ತು. ಡಾಗ್ ಸ್ಕ್ವಾಡ್, ಬಾಂಬ್ ಸ್ಕ್ವಾಡ್ ತಂಡಗಳ ಜತೆ ಕಚೇರಿಯಲ್ಲಾ ಪರಿಶೀಲಿಸಲಾಗಿತ್ತು. ಆದರೆ ಯಾವುದೇ ಶಂಕಾಸ್ಪದ ಹಾಗೂ ಸ್ಫೋಟಕ ವಸ್ತುಗಳು ಪತ್ತೆಯಾಗಿರಲಿಲ್ಲ. ಹಾಗಾಗಿ, ಇವು ಹುಸಿ ಬೆದರಿಕೆ ಇಮೇಲ್ ಅಂತಾ ಪೊಲೀಸರು ತೀರ್ಮಾನಿಸಿದ್ದರು.

## ಅನಿಲ್ ಅಗರವಾಲ್‌ರಿಂದ ಮಹಾದಾನ: ₹20 ಸಾವಿರ ಕೋಟಿ ಆಸ್ತಿ ಸಮಾಜಕ್ಕೆ ಅರ್ಪಣೆ

ವೇದಾಂತ ರಿಸೋರ್ಸಸ್ ಲಿಮಿಟೆಡ್ ಅಧ್ಯಕ್ಷ ಅನಿಲ್ ಅಗರ್ವಾಲ್ ಅವರಿಗೆ ಜೀವನದ ಅತ್ಯಂತ ಕಠಿಣ ಕ್ಷಣ ಎದುರಾಗಿದೆ. ಅವರ ಪ್ರಿಯ ಪುತ್ರ ಅಗ್ನಿವೇಶ್ ಅಗರ್ವಾಲ್ (49) ಅಮೆರಿಕದಲ್ಲಿ ಸ್ಕೀಯಿಂಗ್ ಅಪಘಾತದ ನಂತರ ಚಿಕಿತ್ಸೆ ಪಡೆಯುತ್ತಿದ್ದ ವೇಳೆ ಹಠಾತ್ ಹೃದಯಾಘಾತದಿಂದ ಜನವರಿ 7, 2026ರಂದು ನಿಧನರಾದರು. ನ್ಯೂಯಾರ್ಕ್‌ನ ಮೌಂಟ್ ಸಿನಾಯ್ ಆಸ್ಪತ್ರೆಯಲ್ಲಿ ಚೇತರಿಕೆಯ ಹಾದಿಯಲ್ಲಿದ್ದ ಅಗ್ನಿವೇಶ್ ಅವರಿಗೆ ಅನಿರೀಕ್ಷಿತವಾಗಿ ಹೃದಯಾಘಾತ ಸಂಭವಿಸಿ ಚಿಕಿತ್ಸೆ ಫಲಕಾರಿ ಯಾಗದೇ ಕೊನೆಯುಸಿರೆಳೆದರು.



ಈ ದುಃಖದ ಸಮಯದಲ್ಲಿ ಅನಿಲ್ ಅಗರ್ವಾಲ್ ಅವರು ತಮ್ಮ ಸಂಪತ್ತಿನ ಶೇಕಡಾ 75 ಭಾಗವನ್ನು ಸಮಾಜ ಸೇವೆಗೆ ದಾನ ಮಾಡುವ ಹಿಂದಿನ ವಾಗ್ದಾನವನ್ನು ಮರು ಘೋಷಿಸಿದ್ದಾರೆ. “ಇದು ನನ್ನ ಜೀವನದ ಅತ್ಯಂತ ಕತ್ತಲಿನ ದಿನ” ಎಂದು ಭಾವುಕವಾಗಿ ‘ಎಕ್ಸ್’ನಲ್ಲಿ ಬರೆದ ಅನಿಲ್ ಅಗರ್ವಾಲ್, “ಪ್ರೀತಿಯ ಮಗ ಅಗ್ನಿವೇಶ್ ತುಂಬಾ ಬೇಗ ನಮ್ಮನ್ನು ಬಿಟ್ಟು ಹೋದ. ಅವನು ಕೇವಲ 49 ವರ್ಷದೊಡ್ಡವನು, ಆರೋಗ್ಯವಂತ, ಜೀವಂತಿಕೆಯಿಂದ ತುಂಬಿದ್ದ ಮತ್ತು ಕನಸುಗಳನ್ನು ಹೊಂದಿದ್ದ. ಅಮೆರಿಕದಲ್ಲಿ ಸ್ಕೀಯಿಂಗ್ ಅಪಘಾತದ ನಂತರ ಚೇತರಿಸಿಕೊಳ್ಳುತ್ತಿದ್ದ. ಕೆಟ್ಟದ್ದು ಹಿಂದೆ ಸರಿದಿದೆ ಎಂದು ಭಾವಿಸಿದ್ದೆವು. ಆದರೆ ವಿಧಿಯಾಟ ಬೇರೆಯಾಗಿತ್ತು” ಎಂದು ದುಃಖ ವ್ಯಕ್ತಪಡಿಸಿದ್ದಾರೆ.


ಅಗ್ನಿವೇಶ್ ಅವರು 1976ರ ಜೂನ್ 3ರಂದು ಬಿಹಾರದ ಪಾಟ್ನಾದಲ್ಲಿ ಜನಿಸಿದ್ದರು. ಮೇಯೋ ಕಾಲೇಜ್‌ನಲ್ಲಿ ಶಿಕ್ಷಣ ಪಡೆದ ಅವರು ಫುಜೈರಾ ಗೋಲ್ಡ್ ಸ್ಥಾಪಿಸಿ, ಹಿಂದೂಸ್ತಾನ್ ಜಿಂಕ್ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದರು. ವೇದಾಂತ ಗ್ರೂಪ್‌ನಲ್ಲಿ ಮುಖ್ಯ ಪಾತ್ರ ವಹಿಸಿದ್ದ ಅಗ್ನಿವೇಶ್ ಸ್ಪೋರ್ಟ್ಸ್‌ಮ್ಯಾನ್, ಸಂಗೀತಗಾರ ಮತ್ತು ನಾಯಕರಾಗಿ ಗುರುತಿಸಿಕೊಂಡಿದ್ದರು. ಅವರು ಸರಳ, ಉಷ್ಣ ಹೃದಯಿ ಮತ್ತು ಮಾನವೀಯತೆಯಿಂದ ಕೂಡಿದ್ದರು ಎಂದು ಅನಿಲ್ ಸ್ಮರಿಸಿದ್ದಾರೆ.

ಪುತ್ರನ ನಿಧನದ ನಂತರ ಅನಿಲ್ ಅಗರ್ವಾಲ್ ಅವರು ತಮ್ಮ ಸಂಪತ್ತಿನ ಮುಕ್ಕಾಲು ಭಾಗವನ್ನು (ಸುಮಾರು 3 ಬಿಲಿಯನ್ ಡಾಲರ್ ಅಂದಾಜು 27,000 ಕೋಟಿ ರೂಪಾಯಿ) ದಾನ ಮಾಡುವುದಾಗಿ ಮರು ಘೋಷಿಸಿದ್ದಾರೆ. ಇದು ಮಗನೊಂದಿಗೆ ಹಂಚಿಕೊಂಡ ಕನಸುಗಳನ್ನು ನನಸು ಮಾಡುವ ಉದ್ದೇಶದಿಂದ. ಅಗ್ನಿವೇಶ್ ಸದಾ ಸ್ವಾವಲಂಬಿ ಭಾರತದ ಕನಸು ಕಾಣುತ್ತಿದ್ದರು. ಯಾವ ಮಗು ಹಸಿವಿನಿಂದ ಮಲಗಬಾರದು, ಶಿಕ್ಷಣದಿಂದ ವಂಚಿತರಾಗಬಾರದು, ಪ್ರತಿ ಮಹಿಳೆ ಸ್ವಾವಲಂಬಿಯಾಗಬೇಕು ಮತ್ತು ಯುವಕರಿಗೆ ಉದ್ಯೋಗ ಸಿಗಬೇಕು ಎಂಬುದು ಅವರ ನಂಬಿಕೆಯಾಗಿತ್ತು. ಈ ಕಾರಣಕ್ಕಾಗಿ ಸಂಪತ್ತಿನ ಶೇ.75ನ್ನು ಸಮಾಜಕ್ಕೆ ಹಿಂತಿರುಗಿಸುವ ಮಾತು ಕೊಟ್ಟಿದ್ದೆ ಎಂದು ಅನಿಲ್ ತಿಳಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಸೇರಿ ಹಲವು ಗಣ್ಯರು ಅಗ್ನಿವೇಶ್ ನಿಧನಕ್ಕೆ ಸಂತಾಪ ಸೂಚಿಸಿದ್ದಾರೆ. ಅನಿಲ್ ಅಗರ್ವಾಲ್ ಅವರಿಗೆ ಮತ್ತು ಕುಟುಂಬಕ್ಕೆ ಈ ದುಃಖವನ್ನು ಸಹಿಸುವ ಶಕ್ತಿ ದೊರೆಯಲಿ.

## ಜಿ ರಾಮ್ ಜಿ ಯೋಜನೆಯಲ್ಲಿ ಗ್ರಾಮ ಪಂಚಾಯತಿಗೆ ಹೆಚ್ಚಿನ ಅಧಿಕಾರ: ಬೊಮ್ಮಾಯಿ

**ಬೆಂಗಳೂರು**: ವಿಬಿ ಜಿ ರಾಮ್ ಜಿ ಯೋಜನೆಯಲ್ಲಿ 100 ರಿಂದ 125 ದಿನಕ್ಕೆ ಕೂಲಿ ದಿನ ಹೆಚ್ಚಳ ಮಾಡಿದ್ದಾರೆ. ಇದರಿಂದ ಕೂಲಿಕಾರರಿಗೆ ಅನುಕೂಲ ಆಗಲಿದೆ. ಈ ಯೋಜನೆಯಲ್ಲಿ ಪ್ರತಿ ಮನೆಯಲ್ಲಿ ಕೆಲಸ ಇರುವವರು, ಇಲ್ಲದವರ ಪಟ್ಟಿ ಮಾಡುವುದು, ಅಭಿವೃದ್ಧಿ ಯೋಜನೆ ರೂಪಿಸುವುದು, ಅನುಷ್ಠಾನಗೊಳಿಸುವುದು, ಕಾರ್ಮಿಕರಿಗೆ ಕೂಲಿ ಕೊಡುವ ಅಧಿಕಾರ ಗ್ರಾಮ ಪಂಚಾಯತಿಗಳಿಗೆ ಇದೆ. ಆದರೆ ಕಾಂಗ್ರೆಸ್ ತಮ್ಮ ಕಳ್ಳತನ ನಿಂತು ಹೊಗುವ ಭಯದಿಂದ ವಿರೋಧ ಮಾಡುತ್ತಿದೆ ಎಂದು ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಆರೋಪಿಸಿದರು. ಬೆಂಗಳೂರಿನ ಬಿಜೆಪಿ ಕಚೇರಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ನವರು ಜಿ ರಾಮ್ ಜಿ ಯೋಜನೆಯಲ್ಲಿ ಗ್ರಾಮ ಪಂಚಾಯತಿಗಳ ಅಧಿಕಾರ ಮೊಟಕುಗೊಳಿಸಲಾಗಿದೆ ಅಂತ ಹೇಳುತ್ತಾರೆ. ವಿಬಿ ಜಿ ರಾಮ್ ಜಿ ವಿಧೆಯಕದ ಕ್ಲಾಸ್ 16 ರಲ್ಲಿ ಗ್ರಾಮ ಪಂಚಾಯತಿಗೆ ಎಲ್ಲಾ ಮನೆಯಲ್ಲಿ ಕೆಲಸ ಇದೆಯಾ ಇಲ್ವಾ ಅಂತ ನೋಡುವ ಹಕ್ಕಿದೆ. ಗ್ರಾಮದ ಅಭಿವೃದ್ಧಿ ಯೋಜನೆ ರೂಪಿಸುವ ಹಕ್ಕು , ಯೋಜನೆ ಅನುಷ್ಠಾನ ಮಾಡುವ ಅಧಿಕಾರ, ಎಲ್ಲಾ ದಾಖಲೆ ಮಾಡುವ ಅಧಿಕಾರ, ಕೂಲಿ ಕೊಡುವ ಅಧಿಕಾರ ಅವರಿಗೆ ಇದೆ. ಯಾಕೆ ಕಾಂಗ್ರೆಸ್ ನವರು ವಿರೋಧ ಮಾಡುತ್ತಿದ್ದಾರೆ ಎಂದರು. ಅಕ್ರಮಕ್ಕೆ ತಡೆ



ವಿಕಸಿತ ಭಾರತ ಎಂದರೆ ಗ್ರಾಮ ರಾಜ್ಯ ರಾಮರಾಜ್ಯ ಆಗಲಿ ಅಂತ ಯೋಜನೆ ಮಾಡಿದ್ದಾರೆ. ಈ ಯೋಜನೆಯಲ್ಲಿ ಸ್ಕೂಲ್ ರೂಮ್ ಕಟ್ಟಲು ಅವಕಾಶ ಇದೆ. ಕರ್ನಾಟಕದಲ್ಲಿ ಸುಮಾರು 30 ಸಾವಿರ ಸ್ಕೂಲ್ ರೂಮ್ ಕಟ್ಟಲು ಅವಕಾಶ ಇದೆ. ನಮ್ ಪ್ರಧಾನಮಂತ್ರಿ ನರೇಂದ್ರ ಮೋದಿ ಮತ್ತು ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹ್ವಾನ್ ಅವರು, ಇವತ್ತಿನ ಅಗತ್ಯಕ್ಕೆ ತಕ್ಕಂತೆ ಯೋಜನೆ ಮಾಡಿದ್ದಾರೆ. ಮಧ್ಯವರ್ತಿಗಳ ಹಾವಳಿ ತಪ್ಪಿಸಲು ಆಧಾರ ಸೀಡಿಂಗ್, ಡಿಜಿಟಲೈಜೇಷನ್ ಮಾಡಿದ್ದಾರೆ. ಹಿಂದೆ ಕೂಲಿಗಾಗಿ ಕಾಳು ಯೋಜನೆಯಲ್ಲಿ ಹಿಂದಿನ ಸಿಎಂ ವೀರೇಂದ್ರ ಪಾಟೀಲ್ ಅವರ ಹೆಸರಿನಲ್ಲಿ ಕೂಲಿ ಪಡೆದಿದ್ದರು. ಕಾಲಿನ ಹೆಬ್ಬಟ್ಟಿನಿಂದ ಸಹಿ ಮಾಡಿದ್ದರು. ಈ ಯೋಜನೆ ಅನಿಷ್ಠಾನದಲ್ಲಿ ಗುಲಬರ್ಗಾ ಮೊದಲ ಸ್ಥಾನದಲ್ಲಿತ್ತು ಅದನ್ನು ತನಿಖೆ ಮಾಡಿದಾಗ ಅವ್ಯವಹಾರ ಪತ್ತೆಯಾಗಿ ಸಿಬಿಐ ತನಿಖೆ ನಡೆಸಲಾಗಿತ್ತು. ಬೆಳಗಾವಿಯಲ್ಲಿಯೂ ಸಿಬಿಐ ತನಿಖೆ ನಡೆದಿತ್ತು ಎಂದು ಹೇಳಿದರು.

ವಿಬಿ ಜಿ ರಾಮ್ ಜಿ ಯೋಜನೆಯ ಅಡಿಯಲ್ಲಿ ಗ್ರಾಮ ಪಂಚಾಯತಿಗೆ ಹೆಚ್ಚಿನ ಅಧಿಕಾರ ಇದೆ. ಸಂವಿಧಾನದ 73 ನೇ ತಿದ್ದುಪಡಿಯನ್ನು ಸಂಪೂರ್ಣ ಬಳಕೆ ಮಾಡಿಕೊಳ್ಳಗಿದೆ. ತಮ್ಮ ಕಳ್ಳತನ ನಿಂತು ಹೊಗುವ ಭಯದಿಂದ ಕಾಂಗ್ರೆಸ್ ವಿರೋಧ ಮಾಡುತ್ತಿದೆ. ಗ್ರಾಮ ಪಂಚಾಯತಿ ಸದಸ್ಯರಿಗೆ ಹೆಚ್ಚಿನ ಅಧಿಕಾರ ಕೊಟ್ಟಿದ್ದಾರೆ. ಸದಸ್ಯರು ಇದನ್ನು ಸರಿಯಾಗಿ ಓದಬೇಕು. ಗ್ರಾಮಿಣ ಜನರಿಗೆ ಹೆಚ್ಚಿನ ಸದಪಯೋಗ ನೀಡಲು ಸಕಾರಾತ್ಮವಾಗಿ ಈ ಯೋಜನೆ ಇದೆ. ಇದನ್ನು ಕಾಂಗ್ರೆಸ್ ಕೋರ್ಟ್ ನಲ್ಲಿ ಚಾಲೆಂಜ್ ಮಾಡಲಿ, ಅವರ ನಿಜ ಬಣ್ಣ ಬಯಲಾಗುತ್ತದೆ. ಅಧಿವೇಶನದಲ್ಲಿ ಯೋಜನೆಯ ಬಗ್ಗೆ ಚರ್ಚೆ ಮಾಡುತ್ತೇವೆ ಎಂದು ಹೇಳಿದರು. ಈ ಯೋಜನೆಯಲ್ಲಿ ಗಾಂಧಿಜಿ ಹೆಸರು ಕೈ ಬಿಟ್ಟಿರುವುದಕ್ಕೆ ಕಾಂಗ್ರೆಸ್ ಆಕ್ಷೇಪಿಸುತ್ತಿರುವ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಶೇ 80 ರಷ್ಟು ಯೋಜನೆಗಳು ಜವಾಹರಲಾಲ್ ನೆಹರು, ಇಂದಿರಾ, ರಾಜೀವ್ ಗಾಂಧಿ ಹೆಸರಿನಲ್ಲಿವೆ. ಇದು ಮೊದಲು ಜವಾಹರ ರೋಜಗಾರ ಯೋಜನೆ ಅಂತ ಇತ್ತು. ಚುನಾವಣೆ ಬಂದಾಗ ಗಾಂಧಿ ಹೆಸರನ್ನು ದುರುಪಯೊಗ ಪಡೆಸಿಕೊಂಡಿದ್ದಾರೆ. ಗಾಂಧಿಯನ್ನು ರಾಮನಿಂದ ಬೇರ್ಪಡಿಸಲು ಸಾಧ್ಯವಿಲ್ಲ. ಗಾಂಧಿಯಾವಾಗಲು ರಾಮನ ಹೆಸರು ಹೇಳುತ್ತಿದ್ದರು. ಈಗ ಈ ಯೋಜನೆಗೆ ರಾಮನ ಹೆಸರಿಟ್ಟಿರುವುದಕ್ಕೆ ಗಾಂಧಿ ಆತ್ಮ ಖುಷಿಯಾಗಿರುತ್ತದೆ ಎಂದು ಹೇಳಿದರು. ಕನ್ನಡ ಮಕ್ಕಳ ರಕ್ಷಣೆ ಮಾಡಲಿ ಕೇರಳ ಸರ್ಕಾರ ಕನ್ನಡ ಶಾಲೆಗಳಲ್ಲಿ ಮಲಯಾಳ ಭಾಷೆಯನ್ನು ಪ್ರಥಮ ಭಾಷೆಯಾಗಿ ಕಡ್ಡಾಯ ಮಾಡಿರುವ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಕೇರಳ ರಾಜ್ಯದ ಆಜ್ಞೆಯಂತೆ ಕರ್ನಾಟಕ ದಲ್ಲಿ ಆಡಳಿತ ನಡೆಯುತ್ತಿದೆ. ಅಲ್ಲಿನ ಸಿಎಂ ಹೇಳಿದ ತಕ್ಷಣ ಇವರು ಓಡೋಡಿ ಕೆಲಸ ಮಾಡುತ್ತಿದ್ದಾರೆ. ಪಕ್ಷಪಾತವನ್ನು ದಾರ್ಷ್ಟ್ಯದಿಂದ ಮಾಡುತ್ತಿದ್ದಾರೆ. ವೇಣುಗೋಪಾಲ ಮೂಗಿಗೆ ನೆಗಡಿಯಾದರೆ ರಾಜ್ಯ ಸರ್ಕಾರ ಸೀನುತ್ತದೆ. ಕಾಸರಗೋಡು ಕರ್ನಾಟಕದ ಭಾಗ ಎಂದು ಈಗಲೂ ನಾವು ಕೋರ್ಟ್ ನಲ್ಲಿ ಹೋರಾಟ ಮಾಡುತ್ತಿದ್ದೇವೆ. ಕನ್ನಡ ಮಕ್ಕಳ ರಕ್ಷಣೆ ಮಾಡುವ ಕೆಲಸ ಸಿಎಂ ಮಾಡಬೇಕು. ವಯನಾಡು ದುರಂತವಾದಾಗ ಹಣ ಕೊಟ್ಟಿದ್ದಾರೆ. ಅವರು ಹೇಳಿದ ತಕ್ಷಣ ಇಲ್ಲಿ ಮನೆ ಕಟ್ಟಿ ಕೊಡುತ್ತಿದ್ದಾರೆ. ಅಲ್ಲಿಯ ಸಿಎಂಗೆ ಹೇಳಿ ನಮ್ಮ ಕನ್ನಡ ಮಕ್ಕಳ ರಕ್ಷಣೆ ಮಾಡುವ ಕೆಲಸ ಸಿಎಂ ಮಾಡಬೇಕು. ಕೇವಲ ಹೇಳಿಕೆ ಕೊಡುವುದಲ್ಲ ಎಂದು ಹೇಳಿದರು. ಹೆಚ್‌ಎಂಟಿ ಕಾರ್ಖಾನೆ ಮುಚ್ಚುತ್ತಿರುವ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಹೆಚ್‌ಎಂಟಿಯನ್ನು ಹೊಸ ತಂತ್ರಜ್ಞಾನ ಬಳಸಿ ಉಳಿಸಬೇಕು. ಇದಕ್ಕೆ ಕೇಂದ್ರ ಸರ್ಕಾರ ಮುಂದೆ ಬರಬೇಕು ಎಂದರು

## ನಕ್ಸಲರ ಪತ್ತೆಗೆ 1.19 ಕೋಟಿ ರೂ. ಬಹುಮಾನ ಘೋಷಿಸಿದ್ದ ಸರ್ಕಾರ

**ರಾಯ್ಪುರ್:** ಛತ್ತೀಸ್‌ಗಢದ ದಾಂತೇವಾಡದಲ್ಲಿ 63 ನಕ್ಸಲರು ಸಾಮೂಹಿಕವಾಗಿ ಶರಣಾಗಿದ್ದಾರೆ. ಇದರಲ್ಲಿ 36 ನಕ್ಸಲರ ಪತ್ತೆಗೆ ಸರ್ಕಾರ 1.19 ಕೋಟಿ ರೂ. ಬಹುಮಾನ ಘೋಷಿಸಿಸಿತ್ತು. ಎಲ್ಲರೂ ಭದ್ರತಾ ಪಡೆಗಳ ಮುಂದೆ ಶಸ್ತ್ರಾಸ್ತ್ರಗಳನ್ನು ಒಪ್ಪಿಸಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಶರಣಾದ ಎಲ್ಲಾ 63 ನಕ್ಸಲರಿಗೂ ತಲಾ 50,000 ರೂ. ತಕ್ಷಣದ ಆರ್ಥಿಕ ನೆರವು ನೀಡಲಾಗುವುದು. ಸರ್ಕಾರದ ನೀತಿಗೆ ಅನುಗುಣವಾಗಿ ಅವರಿಗೆ ಪುನರ್ವಸತಿ ಕಲ್ಪಿಸಲಾಗುತ್ತದೆ. ಶರಣಾದವರು ಮಾವೋವಾದಿ ಸಿದ್ಧಾಂತದ ಬಗ್ಗೆ ಭ್ರಮನಿ ರಸನಗೊಂಡಿದ್ದಾರೆ. ಅಲ್ಲದೇ ರಾಜ್ಯ ಸರ್ಕಾರದ ಶರಣಾಗತಿ ಮತ್ತು ಪುನರ್ವಸತಿ ನೀತಿಯಿಂದ ಪ್ರೇರಿತರಾಗಿದ್ದಾರೆ ಎಂದು ದಾಂತೇವಾಡ ಪೊಲೀಸ್ ವರಿಷ್ಠಾಧಿಕಾರಿ ಗೌರವ್ ರೈ ಹೇಳಿದ್ದಾರೆ. ಅಧಿಕಾರಿಗಳ ಪ್ರಕಾರ, ಶರಣಾದ ನಕ್ಸಲರು ದಕ್ಷಿಣ ಬಸ್ತಾರ್ ವಿಭಾಗ, ಪಶ್ಚಿಮ ಬಸ್ತಾರ್ ವಿಭಾಗ ಮತ್ತು ಮಾಡ್ ವಿಭಾಗದಲ್ಲಿ ಸಕ್ರಿಯರಾಗಿದ್ದರು.


ಒಡಿಶಾ ಗಡಿಯಲ್ಲಿರುವ ಪ್ರದೇಶಗಳಲ್ಲಿಯೂ ಈ ಗುಂಪು ಕಾರ್ಯನಿರ್ವಹಿಸುತ್ತಿತ್ತು. ಅವರಲ್ಲಿ ಏಳು ಜನರ ಪತ್ತೆಗೆ ತಲಾ 8 ಲಕ್ಷ ರೂ. ಬಹುಮಾನ ಘೋಷಣೆ ಮಾಡಲಾಗಿತ್ತು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಶರಣಾದವರನ್ನು ಕಲಹಂಡಿ ಪ್ರದೇಶ ಸಮಿತಿಯ ಕಾರ್ಯದರ್ಶಿ ಪಕ್ಲು ಅಲಿಯಾಸ್ ಪ್ರದೀಪ್ ಓಯಮ್ (45), ವಿಭಾಗೀಯ ಸಮಿತಿ ಸದಸ್ಯ ಮೋಹನ್ ಅಲಿಯಾಸ್ ಆಜಾದ್ ಕಡ್ತಿ (32), ಆತನ ಪತ್ನಿ ಭೈರಾಮರ್ ಪ್ರದೇಶ ಸಮಿತಿಯ ಕಾರ್ಯದರ್ಶಿ ಸುಮಿತ್ರಾ ಅಲಿಯಾಸ್ ದ್ರೌಪತಿ ಚಾಪಾ (30), ಪ್ಲಟೂನ್ ಪಕ್ಷದ ಸಮಿತಿ ಸದಸ್ಯ ಹಂಗಿ ಅಲಿಯಾಸ್ ರಾಧಿಕಾ ಲೇಕಮ್ (28), ಕಂಪನಿ ಸಂಖ್ಯೆ 1 ರ ಸದಸ್ಯ ಸುಖ್ರಾಮ್ ತತಿ (20), ಕಂಪನಿ ಸಂಖ್ಯೆ 7ರ ಸದಸ್ಯ ಪಾಂಡು ಮಡ್ಕಮ್ (19), ಮತ್ತು ಅದೇ ಘಟಕದ ಸೋಮ್ದು ಕಡ್ತಿ (21) ಎಂದು ಗುರುತಿಸಲಾಗಿದೆ.

ಜನವರಿ 7 ರಂದು, ನೆರೆಯ ಸುಕ್ಮಾ ಜಿಲ್ಲೆಯಲ್ಲಿ 26 ನಕ್ಸಲರು ಶರಣಾಗಿದ್ದರು. 2025 ರಲ್ಲಿ ಛತ್ತೀಸ್‌ಗಢದಾದ್ಯಂತ 1,500ಕ್ಕೂ ಹೆಚ್ಚು ನಕ್ಸಲರು ಶರಣಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಇ ನ್ನೂ ದೇಶದಲ್ಲಿ ನಕ್ಸಲಿಸಂ ನಿರ್ಮೂಲನೆಗೆ ಕೇಂದ್ರ ಸರ್ಕಾರ ಈ ವರ್ಷ ಮಾರ್ಚ್ 31ರವರೆಗೆ ಗಡುವು ವಿಧಿಸಿದೆ

## ಸಾಕೇತ್ ಕೋರ್ಟ್‌ನಲ್ಲಿ ಕ್ಲರ್ಕ್ ಆತ್ಮಹತ್ಯೆ, ಕೆಲಸದ ಒತ್ತಡಕ್ಕೆ ಬಲಿಯಾದ ಹರೀಶ್ ಸಿಂಗ್

**ನವದೆಹಲಿ:** ದೆಹಲಿಯ ಸಾಕೇತ್ ಕೋರ್ಟ್‌ನಲ್ಲಿ ಕೆಲಸ ಮಾಡುತ್ತಿದ್ದ ಕ್ಲರ್ಕ್ ಒಬ್ಬರು ಕಟ್ಟಡದಿಂದ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಕೆಲಸದ ಅಪಾರ ಒತ್ತಡ ಮತ್ತು ಮಾನಸಿಕ ಒತ್ತಡದಿಂದ ಆತ್ಮಹತ್ಯೆ ಮಾಡಿಕೊಳ್ಳಲಾಗಿದೆ ಎಂದು ಪ್ರಾಥಮಿಕ ತನಿಖೆಯಲ್ಲಿ ತಿಳಿದು ಬಂದಿದೆ ಆತ್ಮಹತ್ಯೆ ಮಾಡಿಕೊಂಡ ವ್ಯಕ್ತಿಯನ್ನು ಹರೀಶ್ ಸಿಂಗ್ ಎಂದು ಗುರುತಿಸಿದ್ದು, ಹರೀಶ್ ಸಿಂಗ್ ಕೋರ್ಟ್ ದಾಖಲೆಗಳ ನಿರ್ವಹಣೆ ಮತ್ತು ನ್ಯಾಯಾಧೀಶರಿಗೆ ಸಹಾಯ ಮಾಡುವ ಕ್ಲರ್ಕ್ ಆಗಿ ಕಾರ್ಯನಿರ್ವಹಿಸುತ್ತಿದ್ದರು.



ಅವರಿಗೆ ಸರ್ಕಾರಿ ನಿಯಮಗಳ ಪ್ರಕಾರ ಶೇ.60ರಷ್ಟು ದೈಹಿಕ ಅಂಗವಿಕಲತ್ವ (ದಿವ್ಯಾಂಗತೆ) ಪ್ರಮಾಣಪತ್ರವಿತ್ತು. ಇದರಿಂದಾಗಿ ಕೆಲಸದ ಒತ್ತಡವನ್ನು ಸಹಿಸಿಕೊಳ್ಳುವುದು ಇವರಿಗೆ ಇನ್ನಷ್ಟು ಕಷ್ಟಕರವಾಗಿತ್ತು ಎಂದು ತಿಳಿದುಬಂದಿದೆ. ಇಂದು ಕೋರ್ಟ್ ಕಾರ್ಯಕಲಾಪಗಳು ನಡೆಯುತ್ತಿರುವ ಸಮಯದಲ್ಲಿ ಈ ಘಟನೆ ನಡೆದಿದ್ದು, ಘಟನೆಯಿಂದ ಕೋರ್ಟ್‌ನಲ್ಲಿ ಕೆಲ ಕಾಲ ಕಾರ್ಯಗಳು ಸ್ಥಗಿತಗೊಂಡವು. ಸ್ಥಳಕ್ಕೆ ಆಗಮಿಸಿದ ಪೊಲೀಸರು ಮೃತದೇಹವನ್ನು ವಶಕ್ಕೆ ಪಡೆದುಕೊಂಡು ತನಿಖೆ ಆರಂಭಿಸಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.